ಸಂಪಾದಕರು: ದರ್ಶನ್.ಟಿ
Editor : DARSHAN.T

# ನಮ್ಮ ಜನ
# NAMMA JANA

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 36 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 11–08–2023 ಶುಕ್ರವಾರ ಪುಟ: 4 ಬೆಲೆ : ರೂ.2–00
Volume - 01 Issue - 36 Title- Code: KARKAN 28269 Chitradurga Date : 11-08-2023 Friday Page: 4 Price: Rs. 2-00



ಒಳ ಪುಟದ ಸುದ್ದಿಗಳು
2 ದೇವರಾಜ ಅರಸು ಜಯಂತಿ ಅರ್ಥಪೂರ್ಣವಾಗಿರಲಿ
3 ಬುದ್ದನ ಆಲೋಚನೆ ದೇಶಕ್ಕೆ ಬೇಕು : ಪ್ರೊ.ಸಿ.ಕೆ.ಎಂ
4 ಗ್ರಾಮೀಣ ಜನರಿಗೆ ಸರ್ಕಾರದ ಸೌಲಭ್ಯ ತಲುಪಿಸಿ : ಟಿ.ರಘುಮೂರ್ತಿ



ಸುದ್ದಿ ಹಾಗೂ ಜಾಹೀರಾತಿಗಾಗಿ ಸಂಪರ್ಕಿಸಿ :
nammajananews@gmail.com
ವಾಟ್ಸ್‌ಅಪ್ ನಂ. 9686622252


## ಫಾಸ್ಟ್ ನ್ಯೂಸ್

## ಪ್ರವೇಶಕ್ಕೆ ಅರ್ಜಿ ವಿಸ್ತರಣೆ

**ಚಿತ್ರದುರ್ಗ** : ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ ನವೋದಯ ವಿದ್ಯಾಲಯದ 2024–25ನೇ ಸಾಲಿಗೆ 6ನೇ ತರಗತಿಯ ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕವನ್ನು ಆಡಳಿತಾತ್ಮಕ ಕಾರಣಗಳಿಂದ ಇದೇ ಆಗಸ್ಟ್ 17 ರವರೆಗೆ ವಿಸ್ತರಿಸಲಾಗಿದೆ.

ಅಭ್ಯರ್ಥಿಗಳು ಅರ್ಜಿಯನ್ನು ಉಚಿತವಾಗಿ ನವೋದಯ ವಿದ್ಯಾಲಯ ಸಮಿತಿಯ ttps://cbseitms.rcil.gov.in/nvs/index/registration ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9740133395, 8310337524 ಗೆ ಸಂಪರ್ಕಿಸಬಹುದು ಎಂದು ಉಡುವಳ್ಳಿಯ ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲ ಡೆನಿಯಲ್ ರೆತನ್ ಕುಮಾರ ತಿಳಿಸಿದ್ದಾರೆ.




ಇತ್ತೀಚೆಗೆ ತಿರುಮಲ ಸಾಂಸ್ಕೃತಿಕ ಯುವಕ ಸಂಘ (ರಿ) ಕಲಾ ತಂಡದವರಿಂದ ಹಾಗೂ ಸಂಸ್ಕೃತಿ ಇಲಾಖೆ, ಭಾರತ ಸರ್ಕಾರ, ನವದೆಹಲಿ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ಸಾಹಿತ್ಯ ಭವನ, ಗಂಗಾವತಿಯಲ್ಲಿ "ದೇವಿ ಮಹಾತ್ಮೆ" ಎಂಬ ಯಕ್ಷಗಾನ ಪ್ರಸಂಗವನ್ನು ಯಶಸ್ವಿಯಾಗಿ ನೆರವೇರಿಸಿದರು.

# ಹೊಸ ಆಟೋಗಳಿಗೆ ಪರ್ಮಿಟ್ ನೀಡಬೇಡಿ

**ಚಿತ್ರದುರ್ಗ** : ಹೊಸದಾಗಿ ಆಟೋಗಳಿಗೆ ಪರ್ಮಿಟ್ ನೀಡಬಾರದೆಂದು ನಗರ ಆಟೋ ಸಂಘಟನೆಗಳ ಒಕ್ಕೂಟದವರು ಜಿಲ್ಲಾಧಿಕಾರಿ ಕಚೇರಿ ಎದುರು ಗುರುವಾರ ಪ್ರತಿಭಟನೆ ನಡೆಸಿದರು.

ಪರ್ಮಿಟ್ ಇಲ್ಲದೆ ನಗರದಲ್ಲಿ ಸಂಚರಿಸುತ್ತಿರುವ ಔಟ್ ಪರ್ಮಿಟ್ ಆಟೋಗಳನ್ನು ಹಿಡಿದು ಹಾಕಬೇಕು.

ಆಟೋ ಚಾಲಕರ ಸಂಘಟನೆಗಳು ನಿಗಧಿಪಡಿಸಿರುವ ಸ್ಥಳಗಳಿಗೆ ಆಟೋ ನಿಲ್ದಾಣಗಳನ್ನು ಕೂಡಲೆ ನಿರ್ಮಿಸಬೇಕು.

ಆಟೋ ಚಾಲಕರುಗಳಿಗಾಗಿಯೇ ನಿಗಮ ಮಂಡಳಿ ರಚನೆಯಾಗಬೇಕು.

ನಗರದಿಂದ ಸೀಟು ಹಾಕಿಕೊಂಡು ಹಳ್ಳಿಗಳಿಗೆ ಹೋಗುವುದು ನಿಲ್ಲಬೇಕು. ಆಶ್ರಯ ಯೋಜನೆಯಡಿ ನಿರ್ಗತಿಕ ಆಟೋ ಚಾಲಕರುಗಳಿಗೆ ಕಡ್ಡಾಯವಾಗಿ ಮನೆಗಳನ್ನು ನಿರ್ಮಿಸಿಕೊಡಬೇಕು.

ನಗರ ಸಾರಿಗೆ ಬಸ್‌ಗಳಿಗೆ ಸಮಯ, ಸ್ಥಳವನ್ನು ನಿಗಧಿಪಡಿಸಬೇಕು ಎಂದು ಪ್ರತಿಭಟನಾನಿರತ ಆಟೋ ಚಾಲಕರುಗಳು ಜಿಲ್ಲಾಡಳಿತಕ್ಕೆ ಮನವಿ ಮಾಡಿದರು.



ಕಳೆದ ಇಪ್ಪತ್ತು ವರ್ಷಗಳಿಂದಲೂ ಬೇಡಿಕೆಗಳ ಈಡೇರಿಕೆಗಾಗಿ ಹೋರಾಟ ನಡೆಸುತ್ತಿದ್ದರೂ ಪ್ರಯೋಜನವಾಗಿಲ್ಲ. ಇನ್ನು ಹದಿನೈದು ದಿನಗಳೊಳಗಾಗಿ ನಮ್ಮ ಎಲ್ಲಾ ಬೇಡಿಕೆಗಳು ಈಡೇರದಿದ್ದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಆಟೋ ಚಾಲಕರುಗಳು ಗಡುವು ನೀಡಿದರು.

ವೀರೇಶ್, ರಾಜು, ಕೆ.ಎಂ.ಮಲ್ಲಿಕಾರ್ಜುನ, ಮಂಜುನಾಥ್ ಸೇರಿದಂತೆ ನೂರಾರು ಆಟೋ ಚಾಲಕರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

# ಅಸ್ವಸ್ಥರಿಗೆ ತಲಾ ಹತ್ತು ಲಕ್ಷ ಘೋಷಿಸಿ : ರಾಜಗೋಪಾಲ್



ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಅಸ್ವಸ್ಥರಾಗಿ ಬಸವೇಶ್ವರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಸಾಂತ್ವನ ಹೇಳಿದ ಭೀಮ್ ಆರ್ಮಿ ರಾಜ್ಯಾಧ್ಯಕ್ಷ ರಾಜಗೋಪಾಲ್

**ಚಿತ್ರದುರ್ಗ** : ಕಲುಷಿತ ನೀರು ಸೇವಿಸಿ ಕವಾಡಿಗರಹಟ್ಟಿಯಲ್ಲಿ ಐವರು ಮೃತಪಟ್ಟಿದ್ದು, ಇನ್ನೂರಕ್ಕೂ ಹೆಚ್ಚು ಮಂದಿ ಅಸ್ವಸ್ಥರಾಗಿದ್ದರೂ ಸಮಾಜ ಕಲ್ಯಾಣ ಇಲಾಖೆ ನಿರ್ಲಕ್ಷ್ಯ ವಹಿಸುತ್ತಿರುವುದರಿಂದ ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹದೇವಪ್ಪ ನಿವಾಸಕ್ಕೆ ಮುತ್ತಿಗೆ ಹಾಕುವುದಾಗಿ ಭೀಮ್ ಆರ್ಮಿ ರಾಜ್ಯಾಧ್ಯಕ್ಷ ರಾಜಗೋಪಾಲ್ ಎಚ್ಚರಿಸಿದರು.

ಕವಾಡಿಗರಹಟ್ಟಿಗೆ ಗುರುವಾರ ಭೇಟಿ ನೀಡಿ ಅಲ್ಲಿಂದ ಬಸವೇಶ್ವರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಯೋಗಕ್ಷೇಮ ವಿಚಾರಿಸಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಕವಾಡಿಗರಹಟ್ಟಿಯಲ್ಲಿ ಗಂಜಿ ಕೇಂದ್ರವನ್ನು ತೆರೆಯಬೇಕಿತ್ತು. ಆಸ್ಪತ್ರೆಯಲ್ಲಿ ಅಚ್ಚುಕಟ್ಟಾದ ಚಿಕಿತ್ಸೆ ಸಿಗುತ್ತಿಲ್ಲ. ಮಹಿಳೆ ಮಕ್ಕಳು ಪುರುಷರು ಒಂದೊಂದು ಕಡೆ ದಾಖಲಾಗಿದ್ದಾರೆ. ಇಡಿ ಮನೆ ಮಂದಿಯೆಲ್ಲಾ ಆಸ್ಪತ್ರೆಯಲ್ಲಿದ್ದರೆ ದುಡಿದು ಸಂಸಾರ ಸಾಗಿಸುವವರು ಯಾರು. ಸಿನಿಮಾ ಹೀರೋಗಳ ಮದುವೆಗೆ ಹೋಗುವ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕವಾಡಿಗರಹಟ್ಟಿಗೆ ಬಂದು ವಾಸ್ತವ ಸ್ಥಿತಿಯನ್ನು ಅರಿತು ಮೃತ ಕುಟುಂಬಗಳಿಗೆ ತಲಾ ಒಂದು ಕೋಟಿ ರೂ.ಪರಿಹಾರ ನೀಡಬೇಕು. ಅಸ್ವಸ್ಥರಿಗೆ ತಲಾ ಹತ್ತು ಲಕ್ಷ ರೂ.ಗಳನ್ನು ಘೋಷಿಸಬೇಕು ಎಂದು ಒತ್ತಾಯಿಸಿದರು.

> ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕವಾಡಿಗರಹಟ್ಟಿಗೆ ಬಂದು ವಾಸ್ತವ ಸ್ಥಿತಿಯನ್ನು ಅರಿತು ಮೃತ ಕುಟುಂಬಗಳಿಗೆ ತಲಾ ಒಂದು ಕೋಟಿ ರೂ.ಪರಿಹಾರ ನೀಡಬೇಕು.
> **– ರಾಜಗೋಪಾಲ್, ರಾಜ್ಯಾಧ್ಯಕ್ಷ**

ಬಸವೇಶ್ವರ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರ ಪರೀಕ್ಷೆಗೆ ವಾಸವಿ ಲ್ಯಾಬ್‌ಗೆ ಹೋಗುವಂತೆ ಬಸವೇಶ್ವರ ಆಸ್ಪತ್ರೆಯಲ್ಲಿ ವೈದ್ಯರು ಚೀಟಿ ಬರೆದು ಕೊಟ್ಟಿದ್ದಾರೆ. ಎಲ್ಲವನ್ನು ಕಳೆದುಕೊಂಡಿರುವ ಬಡವರು ಹೇಗೆ ತಾನೆ ಹಣ ಹೊಂದಿಸಲು ಸಾಧ್ಯ. ರಾಜ್ಯ ಬಜೆಟ್‌ನಲ್ಲಿ 34 ಸಾವಿರ ಕೋಟಿ ರೂ.ಗಳಿವೆ. ಅದರಲ್ಲಿ ಪರಿಹಾರವಾಗಿ ಐದು ಕೋಟಿ ರೂ.ಗಳನ್ನು ನೀಡಿದರೆ ಸರ್ಕಾರಕ್ಕೆ ಏನು ನಷ್ಟವಾಗುವುದಿಲ್ಲ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವವರಿಗೆ ಪ್ರತಿದಿನ ಒಂದೊಂದು ಆಹಾರದ ಕಿಟ್ ಕೊಡಬೇಕಿತ್ತು. ಹೇಳುವವರು ಕೇಳುವವರು ಯಾರು ಇಲ್ಲದಂತಾಗಿದ್ದಾರೆ. ಹಾಗಾಗಿ ಮುಖ್ಯಮಂತ್ರಿ ಬಳಿಯೂ ಚರ್ಚಿಸಲಾಗುವುದು ಎಂದರು.

ಭೀಮ್ ಆರ್ಮಿ ರಾಜ್ಯ ಕಾರ್ಯಾಧ್ಯಕ್ಷ ಖಾಲಿದ್ ಹುಸೇನ್, ರಾಜ್ಯ ಉಪಾಧ್ಯಕ್ಷ ಅವಿನಾಶ್ ಸಿ.ಎಲ್. ರಘು, ಆಕಾಶ್, ಅಂಬರೀಶ್, ಪ್ರದೀಪ್, ಆಸಿಫ್, ವಿಶ್ವ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ಸ್ವಾತಂತ್ರ್ಯ ಹೋರಾಟಗಾರ ಎ.ಭೀಮಪ್ಪಗೆ ಸನ್ಮಾನ



**ಚಿತ್ರದುರ್ಗ** : ಕ್ವಿಟ್ ಇಂಡಿಯಾ ಚಳುವಳಿಯ ನೆನಪು ಹಾಗೂ ಭಾರತ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಜಿಲ್ಲಾಡಳಿತದ ವತಿಯಿಂದ ಬುಧವಾರ ಸ್ವಾತಂತ್ರ್ಯ ಹೋರಾಟಗಾರರ ಮನೆ ಬಾಗಿಲಿಗೆ ಹೋಗಿ ಸ್ವಾತಂತ್ರ್ಯ ಹೋರಾಟಗಾರರಿಗೆ ಆತ್ಮೀಯವಾಗಿ ಸನ್ಮಾನಿಸಿ ಗೌರವ ಸಮರ್ಪಿಸಲಾಯಿತು.

ಆಗಸ್ಟ್ 15ರಂದು ನಡೆಯಲಿರುವ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಕ್ವಿಟ್ ಇಂಡಿಯಾ ಚಳುವಳಿಯ ಸ್ಮರಣಾರ್ಥ ಹಾಗೂ ಸ್ವಾತಂತ್ರ್ಯ ದಿನಾಚರಣೆಗೂ ಮುನ್ನ ಸ್ವಾತಂತ್ರ್ಯ ಹೋರಾಟಗಾರರ ಮನೆಗೆ ತೆರಳಿ ಸನ್ಮಾನಿಸಬೇಕು ಎಂಬುದು ಸರ್ಕಾರದ ನಿರ್ದೇಶನವಿದ್ದು, ಅದರನ್ವಯ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಅವರು ಚಿತ್ರದುರ್ಗ ತಾಲ್ಲೂಕಿನ ಕೂನಬೇವು ಗ್ರಾಮಕ್ಕೆ ತೆರಳಿ ಸ್ವಾತಂತ್ರ್ಯ ಹೋರಾಟಗಾರ ಎ. ಭೀಮಪ್ಪ ಅವರಿಗೆ ಜಿಲ್ಲಾಡಳಿತದ ವತಿಯಿಂದ ಸನ್ಮಾನಿಸಿದರು.

ಚಿತ್ರದುರ್ಗ ತಾಲ್ಲೂಕಿನ ತುರುವನೂರು ಹೋಬಳಿ ಕೂನಬೇವು ಗ್ರಾಮದ ಸ್ವಾತಂತ್ರ್ಯ ಹೋರಾಟಗಾರ ಎ.ಭೀಮಪ್ಪ ಅವರು ಸನ್ಮಾನ ಸ್ವೀಕರಿಸಿ ಮಾತನಾಡಿ, ನಾನು ಬಾಲ್ಯದಲ್ಲಿ ತುರುವನೂರು ಪ್ರಾಥಮಿಕ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವಾಗ ಆ ಸಂದರ್ಭದಲ್ಲಿ ಎಸ್.ನಿಜಲಿಂಗಪ್ಪ ಅವರು ಆಗಮಿಸಿ, ಗ್ರಾಮದ ಆಂಜನೇಯ ದೇಗುಲದಲ್ಲಿ ಜನರನ್ನು ಸೇರಿಸಿ ಭಾಷಣ ಮಾಡುತ್ತಿದ್ದರು. ಅವರ ಭಾಷಣದಿಂದ ಮನಸ್ಸು ಪರಿವರ್ತನೆಯಾಯಿತು. ದೇಶ ಯಾವ ಸ್ಥಿತಿಯಲ್ಲಿ ಇದೆ. ನಾವು ಏನಾಗಿದ್ದೇವೆ. ಪರಕೀಯರ ಅಧಿಕಾರಕ್ಕೆ ಒಳಪಟ್ಟಿದ್ದೇವೆ. ನಮಗೆ ಸ್ವಾತಂತ್ರ್ಯವಿಲ್ಲ ಎಂಬ ವಿಷಯ ಅರಿತು ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸಬೇಕು ಎಂದು ತೀರ್ಮಾನಿಸಿ ಸ್ನೇಹಿತರ ಜೊತೆಗೆ ಎಸ್.ನಿಜಲಿಂಗಪ್ಪ ಅವರ ಅನುಯಾಯಿಗಳಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ತೊಡಗಿಸಿಕೊಂಡೆವು ಎಂದು ಸ್ಮರಿಸಿದರು.

ಈಚಲು ಮರದ ಸತ್ಯಾಗ್ರಹದಲ್ಲಿ ಭಾಗಿಹಿಸಿ, ಈಚಲು ಮರಗಳನ್ನು ನಾಶ ಮಾಡಲಾಯಿತು. ಇದಕ್ಕಾಗಿ ಕೆಲವು ದಿನಗಳ ಕಾಲ ಬಂಧನದಲ್ಲಿಟ್ಟು, ಗಡಿಪಾರು ಮಾಡಲಾಯಿತು. ಆದಾಗ್ಯೂ ಎಸ್.ನಿಜಲಿಂಗಪ್ಪ ಅವರ ಅನುಯಾಯಿಗಳಾಗಿ ಭಾರತ ಸ್ವಾತಂತ್ರ್ಯಕ್ಕಾಗಿ ಹೋರಾಟದಲ್ಲಿ ಭಾಗವಹಿಸಿ, ಬ್ರಿಟೀಷರ ವಿರುದ್ಧ ಹೋರಾಟ ನಡೆಸಿ, ಸ್ವಾತಂತ್ರ್ಯ ಪಡೆಯಲಾಯಿತು ಎಂದು ತಮ್ಮ ಅನುಭವ ಹಂಚಿಕೊಂಡರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ, ಚಿತ್ರದುರ್ಗ ತಹಶೀಲ್ದಾರ್ ಡಾ.ನಾಗವೇಣಿ, ಉಪ ತಹಶೀಲ್ದಾರ್ ಪ್ರಕಾಶ್, ರಾಜಸ್ವ ನಿರೀಕ್ಷಕ ಎಂ.ಎಸ್.ಸ್ವಾಮಿ, ಗ್ರಾಮ ಆಡಳಿತಾಧಿಕಾರಿ ಶೋಭಾ ಉಪಸ್ಥಿತರಿದ್ದರು.




ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ

## ಫಾಸ್ಟ್ ನ್ಯೂಸ್

### ಭದ್ರಾ ನಾಲೆಗಳಿಗೆ ನೀರು ಬಿಡುಗಡೆ

**ದಾವಣಗೆರೆ :** ಭದ್ರಾ ಜಲಾಶಯದ ಜಲಾನಯನ ಪ್ರದೇಶದಲ್ಲಿನ ಮುಂಗಾರು ಬೆಳೆಗಳಿಗೆ ಆಗಸ್ಟ್ 10 ರಿಂದ ಎಡದಂಡೆ ಮತ್ತು ಬಲದಂಡೆ ನಾಲೆ, ಆನವೇರಿ ಶಾಖಾ ನಾಲೆ, ದಾವಣಗೆರೆ ಶಾಖಾ ನಾಲೆ, ಮಲೆಬೆನ್ನೂರು ಶಾಖಾನಾಲೆ, ಹರಿಹರ ಶಾಖಾನಾಲೆ ಮತ್ತು ಗೋದಿ ನಾಲೆಗಳಿಗೆ ನೀರು ಹರಿಸಲಾಗುತ್ತದೆ.

ಆದ್ದರಿಂದ ಕಾಲುವೆ ಪಾತ್ರಗಳಲ್ಲಿ ಸಾರ್ವಜನಿಕರು ಮತ್ತು ರೈತರು ತಿರುಗಾಡುವುದು, ದನಕರುಗಳನ್ನು ತೊಳೆಯುವುದು ಮತ್ತು ದೈನಂದಿನ ಚಟುವಟಿಕೆ ಮಾಡುವುದನ್ನು ನಿ??ಧಿಸಲಾಗಿದೆ ಎಂದು ಬಿ.ಆರ್, ಪ್ರಾಜೆಕ್ಟ್ ನ ಕ.ನೀ.ನಿ.ನಿ, ಭದ್ರಾ ಯೋಜನಾ ವೃತ್ತ, ಅಧೀಕ್ಷಕ ಅಭಿಯಂತರರು ಹಾಗೂ ಭದ್ರಾ ಯೋಜನಾ ನೀರಾವರಿ ಸಲಹಾ ಸಮಿತಿ ಸದಸ್ಯ ಕಾರ್ಯದರ್ಶಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿದ್ಯಾರ್ಥಿನಿಲಯಕ್ಕೆ ಕಟ್ಟಡ ಬೇಕಾಗಿದೆ

**ದಾವಣಗೆರೆ :** ನಗರ ವ್ಯಾಪ್ತಿಯಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಮಂಜೂರಾಗಿದ್ದು, ನಿಲಯ ನಡೆಸಲು 900 ಚದರ ಮೀಟರ್ ವಿಸ್ತೀರ್ಣವುಳ್ಳ ಮೂಲಭೂತ ಸೌಲಭ್ಯವಿರುವ ಸುಸಜ್ಜಿತವಾದ ಕಟ್ಟಡದ ಮಾಲೀಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತಿಯುಳ್ಳ ಕಟ್ಟಡದ ಮಾಲೀಕರು ಆಗಸ್ಟ್ 25 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ತಾಲ್ಲೂಕು ಕಲ್ಯಾಣಾಧಿಕಾರಿ ಜಿ. ಮಲ್ಲಿಕಾರ್ಜುನಪ್ಪ(ಹೊಸ ರಿಂಗ್ ರಸ್ತೆ), ಶ್ರೀಮತಿ ರತ್ನಮ್ಮ ತೆಲಗಿ ಸಿದ್ದೇಶ್ ರೆಸಿಡೆನ್ಸಿಯಲ್ ಲೇಔಟ್, ಶ್ರೀ ದೇವರಾಜ ಅರಸು ಭವನ ಇವರನ್ನು ಸಂಪರ್ಕಿಸಲು ತಾಲ್ಲೂಕು ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ರವೇಶಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ :** ಹರಿಹರದ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್ ಮತ್ತು ಡಿಪ್ಲೋಮಾ ಇನ್ ಆಟೋಮೇಷನ್ ಅಂಡ್ ರೋಬೋಟಿಕ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ಅರ್ಜಿ ಹಾಗೂ ಪ್ರವೇಶಕ್ಕಾಗಿ ಹರಿಹರದ ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದ ಪ್ರಾಶುಪಾಲರನ್ನು ಸಂಪರ್ಕಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂ.8711913947 ಸಂಪರ್ಕಿಸ ಬಹುದೆಂದು ಸರ್ಕಾರಿ ಉಪಕರಣ ಮತ್ತು ತರಬೇತಿ ಕೇಂದ್ರದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ

**ದಾವಣಗೆರೆ :** ಆಗಸ್ಟ್ 11 ರಂದು ಮ. 3 ಗಂಟೆಗೆ ಮಹಾನಗರ ಪಾಲಿಕೆ ಕೌನ್ಸಿಲ್ ಸಭಾಂಗಣದಲ್ಲಿ ನಾಲ್ಕು ಸ್ಥಾಯಿ ಸಮಿತಿ ಸದಸ್ಯರುಗಳನ್ನು ಆಯ್ಕೆ ಮಾಡಲು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್ ಇವರ ಅಧ್ಯಕ್ಷತೆಯಲ್ಲಿ ಸಭೆ ಕರೆಯಲಾಗಿದೆ.

### ಗುತ್ತಿಗೆದಾರರ ಸಂಘದ ನಿಯೋಗ

ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು BBMP ಗುತ್ತಿಗೆದಾರ ಮಂಜುನಾಥ್ ನೇತೃತ್ವದ ಗುತ್ತಿಗೆದಾರರ ಸಂಘದ ನಿಯೋಗವು ಭೇಟಿಯಾಗಿದೆ. ಬಿಬಿಎಂಪಿ ಗುತ್ತಿಗೆದಾರ ಹಣ ಬಿಡುಗಡೆ ವಿಳಂಬ ವಿಚಾರವಾಗಿ ಆರ್.ಟಿ.ನಗರದ ಬೊಮ್ಮಾಯಿ ನಿವಾಸದಲ್ಲಿದಲ್ಲಿ ಭೇಟಿಯಾಗಿ ಚರ್ಚೆ ನಡೆಸಲಾಗುತ್ತಿದೆ

### ಮತ್ತೆ ಮುನ್ನೆಲೆಗೆ ಬಂದ ಹಿಜಾಬ್ ವಿವಾದ

ಚಿಕ್ಕಮಗಳೂರು ನಗರದ ಐ.ಡಿ.ಎಸ್.ಜಿ. ಕಾಲೇಜಿನಲ್ಲಿ ಹಿಜಾಬ್ ವಿವಾದ ಮತ್ತೆ ಮುನ್ನೆಲೆಗೆ ಬಂದಿದೆ. ಬುರ್ಖಾ, ಹಿಜಾಬ್ ಧರಿಸಿ ಕ್ಲಾಸ್ ರೂಮಿನಲ್ಲಿ ಕುಳಿತಿರುವ ವಿಡಿಯೋ ವೈರಲ್ ಆಗಿದೆ. ವಿದ್ಯಾರ್ಥಿನಿಯರು ಬುರ್ಖಾ ಧರಿಸಿ ತರಗತಿಯಲ್ಲಿ ಪಾಠ ಕೇಳ್ತಿದ್ದಾರೆ. ಬುರ್ಖಾ ಧರಿಸಿ ಕಾಲೇಜಿನ ಕಾರಡಾರ್ ನಲ್ಲಿ ಓಡಾಡ್ತಿದ್ದಾರೆ. ಶಿಕ್ಷಕಿ ಕೂಡ ಬುರ್ಖಾ ಧರಿಸಿಯೇ ಪಾಠ ಮಾಡುತ್ತಿರುವ ವಿಡಿಯೋ ವೈರಲ್ ಆಗಿದೆ.

### ಬಿ.ವೈ.ವಿಜಯೇಂದ್ರ ವಾಗ್ದಾಳಿ

ಗುತ್ತಿಗೆದಾರರು 3–4 ಸಚಿವರ ಮೇಲೆ ಕಮಿಷನ್ ಆರೋಪ ಮಾಡ್ತಿದ್ದಾರೆ. ಗ್ಯಾರಂಟಿ ಹೆಸರೇಳಿ ಜನರ ಕಿವಿಗೆ ಹೂವಿಟ್ಟು ಅಧಿಕಾರಕ್ಕೆ ಬಂದರು ಎಂದು ಬೆಂಗಳೂರಿನಲ್ಲಿ ಶಿಕಾರಿಪುರ ಕ್ಷೇತ್ರದ ಶಾಸಕ ಬಿ.ವೈ.ವಿಜಯೇಂದ್ರ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಈಗ ರಾಜ್ಯ ಜನರಿಗೆ ಮೋಸ ಮಾಡಿ ಭ್ರಷ್ಟಾಚಾರದಲ್ಲಿ ತೊಡಗಿದ್ದಾರೆ. ರಾಜ್ಯದ ಜನತೆ ಈ ಸರ್ಕಾರಕ್ಕೆ ಹಿಡಿಶಾಪ ಹಾಕುತ್ತಿದ್ದಾರೆ. ಯಾರೇ ಲಂಚ ಕೇಳಿದ್ರೂ ನನ್ನ ಗಮನಕ್ಕೆ ತನ್ನಿ ಅಂತಾ ಡಿಕೆ ಹೇಳಿದ್ರು. ಡಿಕೆ ಗಮನಕ್ಕೆ ತಂದ್ರೆ ಯಾವ ಪರಿಸ್ಥಿತಿ ಬರುತ್ತೆ ಅಂತಾ ಅರ್ಥವಾಗಿದೆ. ತಮ್ಮ ಜೇಬು ತುಂಬಿಸಿ, ಕಾಂಗ್ರೆಸ್‌ನವರ ಜೇಬನ್ನೂ ತುಂಬುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

# ದೇವರಾಜ ಅರಸು ಜಯಂತಿ ಅರ್ಥಪೂರ್ಣವಾಗಿರಲಿ



**ಚಿತ್ರದುರ್ಗ :** ನಾಡಿನ ಕಣ್ಮಣಿ ಎನಿಸಿದ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ ಜಯಂತಿ ಆಚರಣೆ ಅರ್ಥಪೂರ್ಣವಾಗಿರಲಿ ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಈ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಖ್ಯಮಂತ್ರಿಗಳಾಗಿ ದೇವರಾಜ ಅರಸು ಅವರು ಹಲವು ಉತ್ತಮ ಕಾರ್ಯಗಳನ್ನು ಮಾಡಿದ್ದಾರೆ. ರಾಜ್ಯದಲ್ಲಿ ವಿದ್ಯಾರ್ಥಿ ನಿಯಲಯಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಸ್ಥಾಪಿಸಿ ಹಿಂದುಳಿದ ವರ್ಗಗಳ ಮಕ್ಕಳ ಶಿಕ್ಷಣಕ್ಕೆ ಇಂಬು ನೀಡಿದರು. ಕಾಂತ್ರಿಕಾರ ಭೂ ಸುಧಾರಣೆ ಕಾಯ್ದೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸುವಲ್ಲಿ ದೇವರಾಜ ಅರಸು ಅವರ ಪಾತ್ರ ದೊಡ್ಡದು. ಹಿಂದುಳಿದ ವರ್ಗಗಳಿಗೆ ಮೀಸಲಾತಿ ಕಲ್ಪಿಸುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಮುನ್ನುಡಿ ಬರೆದರು. ಇದೇ ಆಗಸ್ಟ್ 20ನೇ ತಾರೀಖಿನಂದು ದೇವರಾಜು ಅರಸು ಅವರ 108ನೇ ಜನ್ಮದಿನವನ್ನು ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ ಹಾಗೂ ಹಿಂದುಳಿದ ವರ್ಗಗಳ ಇಲಾಖೆ ವತಿಯಿಂದ ವಿಜೃಂಭಣೆಯಿಂದ ಆಚರಿಸಲಾಗುವುದು. ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ತಪ್ಪದೇ ಜಯಂತಿಯಲ್ಲಿ ಭಾಗವಹಿಸಬೇಕು. ಹಿಂದುಳಿದ ವರ್ಗಗಳ ಇಲಾಖೆ ವಿದ್ಯಾರ್ಥಿನಿಲಯಗಳಲ್ಲಿ ಆಯಾ ನಿಲಯಪಾಲಕರ ನೇತೃತ್ವದಲ್ಲಿ ದೇವರಾಜು ಅರಸು ಜಯಂತಿ ಆಚರಿಸಿ, ಅವರ ಬಗೆಗಿನ ಪುಸ್ತಕಗಳನ್ನು ಓದಲು ಮಕ್ಕಳಿಗೆ ನೀಡಿ ಎಂದರು.

ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ತರಾಸು ರಂಗಮಂದಿರದವರೆಗೂ ಜಾನಪದ ಕಲಾತಂಡಗಳೊಂದಿಗೆ ದೇವರಾಜ ಅರಸು ಭಾವಚಿತ್ರ ಮೆರಣಿಗೆ ಮಾಡಲಾಗುವುದು. ರಂಗಮಂದಿರಲ್ಲಿ ವೇದಿಕೆಯನ್ನು ಹೂ ಕುಂಡ ಹಾಗೂ ಹೂಗಳಿಂದ ತೆ–ೂೀಟಗಾರಿಕೆ ಇಲಾಖೆ ವತಿಯಿಂದ ಅಲಂಕರಿಸಬೇಕು.

ಹಿಂದುಳಿದ ವರ್ಗಗಳ ಇಲಾಖೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಜಯಂತಿ ಕಾರ್ಯಕ್ರಮದಲ್ಲಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸುವಂತೆ ತಿಳಿಸಿದರು.

ಸಭೆಯಲ್ಲಿ ಬಿಸಿಎಂ ಜಿಲ್ಲಾ ಅಧಿಕಾರಿ ಸುಬ್ರಾನಾಯಕ್, ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಹನುಮನಾಯಕ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಆರ್. ಬಣಕಾರ್, ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ, ಪಶು ಸಂಗೋಪನಾ ಇಲಾಖೆ ಉಪನಿರ್ದೇಶಕ ಬಾಬುರತ್ನ, ಕನ್ನಡ ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ ಸೇರಿ ಸಮಾಜದ ಮುಖಂಡರು ಇದ್ದರು.

# ರಾಗಿ ಪಾವತಿಗೆ ರೈತರ ಅನಿರ್ದಿಷ್ಟಾವಧಿ ಪ್ರತಿಭಟನೆ

**ಹೊಸದುರ್ಗ :** ಹೊಸದುರ್ಗ ಪಟ್ಟಣ ಮತ್ತು ಶ್ರೀರಾಂಪುರ ರಾಗಿ ಖರೀದಿ ಕೇಂದ್ರಗಳಲ್ಲಿ ರಾಗಿ ಬಿಟ್ಟು ನಾಲ್ಕೈದು ತಿಂಗಳಾದರೂ, ರೈತರ ಖಾತೆಗೆ ಹಣ ಪಾವತಿಯಾಗಿಲ್ಲ. ರೈತರ ಖಾತೆಗೆ ಹಣ ಪಾವತಿ ಮಾಡುವವರೆಗೂ ಮೇಲೆಳುವುದಿಲ್ಲವೆಂದು ಒತ್ತಾಯಿಸಿ ಪಟ್ಟಣದ ತಾಲೂಕು ಕಚೇರಿ ಮುಂಭಾಗ ಕರ್ನಾಟಕ ರಾಜ್ಯ ರೈತ ಸಂಘದ ವತಿಯಿಂದ ಗುರುವಾರ ಅನಿರ್ದಿಷ್ಟ ಅವಧಿ ಪ್ರತಿಭಟನೆಯನ್ನು ಪ್ರಾರಂಭಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಾಧ್ಯಕ್ಷ ಈಚಗಟ್ಟ ಸಿದ್ಧವೀರಪ್ಪ ಮಾತನಾಡಿ, ಹೊಸದುರ್ಗ ರಾಗಿ ಖರೀದಿ ಕೇಂದ್ರದಲ್ಲಿ ನಡೆದಿರುವ ಭ್ರಷ್ಟಾಚಾರದಿಂದ ಕರ್ನಾಟಕ ರಾಜ್ಯವೇ ಹೊಸದುರ್ಗದ ಕಡೆ ತಿರುಗಿ ನೋಡುತ್ತಿದೆ. ಸುಮಾರು 1.ಕೋಟಿ 50.ಲಕ್ಷ ಬೆಲೆಬಾಳುವ ರಾಗಿಯನ್ನು ರೈತರಿಂದ ಅಕ್ರಮವಾಗಿ ಮಾರುಕಟ್ಟೆ ಅಧಿಕಾರಿಗಳು ಕಬಳಿಸಿದ್ದಾರೆ. ಒಬ್ಬ ರೈತನಿಂದ ಪ್ರತಿ ಕ್ವಿಂಟಲ್ ಗೆ 4.ಕೆಜಿ ಹೆಚ್ಚುವರಿ ರಾಗಿ ತೆಗೆದುಕೊಂಡಿ–ದ್ದಾರೆ. ರೈತರು ಶ್ರಮಪಟ್ಟು ಬೆಳೆದ ಆಹಾರಧಾನ್ಯಗಳನ್ನೇ ಕದ್ದು, ರೈತರ ಬೆವರ ಹನಿಯಲ್ಲಿಯೂ ಅಕ್ರಮವಾಗಿ ಹಣ ದೋಚಬೇಕೆಂದು ಹೊರಟಿರುವ ಭ್ರಷ್ಟ ಅಧಿಕಾರಿಗಳಿಗೆ ನಾಚಿಕೆಯಾಗಬೇಕು. ಅಲ್ಲದೇ, ಹೊಸದುರ್ಗ ರಾಗಿ ಖರೀದಿ ಕೇಂದ್ರದಲ್ಲಿ ಅಕ್ರಮ ವೆಸಗಿರುವ ಭ್ರಷ್ಟರಿಗೆ ಕಠಿಣ ಶಿಕ್ಷೆ ಆಗಬೇಕು. ಎಲ್ಲಿಯವರೆಗೂ ರೈತರ ಖಾತೆಗೆ ಹಣಪಾವತಿ ಮಾಡುವುದಿಲ್ಲವೋ, ಅಲ್ಲಿಯವರೆಗೂ ನಮ್ಮ ಪ್ರತಿಭಟನೆ ಮುಂದುವರೆಯುತ್ತದೆ. ಕೂಡಲೇ ಸರ್ಕಾರ ರೈತರ ಖಾತೆಗೆ ರಾಗಿ ಅಣ ಪಾವತಿ ಮಾಡಬೇಕೆಂದು ಒತ್ತಾಯಿಸಿದರು.



ಈ ವೇಳೆ ಪ್ರತಿಭಟನೆಯಲ್ಲಿ ರೈತ ಸಂಘದ ತಾಲೂಕು ಘಟಕದ ಗೌರವಾಧ್ಯಕ್ಷ ಕೊರಟಗೆರೆ ಮಹೇಶ್ವರಪ್ಪ, ಅಧ್ಯಕ್ಷ ಅರಳಿಹಳ್ಳಿ ಬೋರೇಶ್, ಕಾರ್ಯದರ್ಶಿ ನೀರಗುಂದ ರಘು ಮತ್ತು ಜಿಲ್ಲಾ ಕಾರ್ಯಾಧ್ಯಕ್ಷ ಕರಿಸಿದ್ದಯ್ಯ ಸೇರಿದಂತೆ ಹಲವು ರೈತರು ಪಾಲ್ಗೊಂಡಿದ್ದರು.

# ಅನಧಿಕೃತ ಶಾಲೆಗಳಿಗೆ ಬೀಗ ಜಡಿಯಲು ಮುಂದಾದ ಸರ್ಕಾರ

**ಬೆಂಗಳೂರು :** ರಾಜ್ಯದಲ್ಲಿ ನೋಂದಣಿ ಪಡೆಯದೆ ಅನಧಿಕೃತವಾಗಿ ನಡೆಸುತ್ತಿರುವ ಶಾಲೆಗಳಿಗೆ ಬಿಸಿ ಮುಟ್ಟಿಸಲು ಸರ್ಕಾರ ಮುಂದಾಗಿದ್ದು, ಈ ಸಂಬಂಧ ಜಿಲ್ಲಾ ಸಾರ್ವಜನಿಕ ಶಿಕ್ಷಣಾಧಿಕಾರಿಗಳಿಗೆ ಸುತ್ತೋಲೆ ಹೊರಡಿಸಿ ಆ. 16ರೊಳಗೆ ತಮ್ಮ ತಮ್ಮ ಜಿಲ್ಲಾ ವ್ಯಾಪ್ತಿಯಲ್ಲಿ ನಿಯಮಬಾಹಿರವಾಗಿ ನಡೆಯುತ್ತಿರುವ ಶಾಲೆಗಳ ವಿರುದ್ಧ ಕ್ರಮ ಜರುಗಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವಂತೆ ಖಡಕ್ ಆದೇಶ ನೀಡಿದೆ.

ಈಗಾಗಲೇ ರಾಜ್ಯದಲ್ಲಿ ನೂರಾರು ಅನಧಿಕೃತ ಶಾಲೆಗಳ ಕುರಿತು ಮಾಧ್ಯಮಗಳಲ್ಲಿ ವರದಿ ಪ್ರಕಟಗೊಂಡ ಬೆನ್ನಲ್ಲೆ ಎಚ್ಚೆತ್ತು–ಕೊಂಡ ರಾಜ್ಯ ಶಿಕ್ಷಣ ಇಲಾಖೆ ಎಲ್ಲ ಅನಧಿಕೃತ ಶಾಲೆಗಳಿಗೆ ಬೀಗ ಜಡಿಯಲು ಮುಂದಾಗಿದೆ.

ಅಧಿಕೃತವಾಗಿ ನೋಂದಣಿ ಪಡೆಯದೆ, ನೋಂದಣಿ ಇಲ್ಲದೆ ಶಾಲೆಗಳ ಉನ್ನತೀಕರಣ ಅನಧಿಕೃತ ಪಠ್ಯಕ್ರಮ ಮತ್ತು ಅನಧಿಕೃತ ಪಠ್ಯಪುಸ್ತಕ ಬೋಧನೆ, ಕೇಂದ್ರ ಪಠ್ಯ ಕ್ರಮಕ್ಕೆ ಸಂಯೋಜಿಸಿದ ನಂತರ ರಾಜ್ಯಪಠ್ಯ ಕ್ರಮದಲ್ಲಿ ಕಾನೂನು ಬಾಹಿರವಾಗಿ ಶಿಕ್ಷಣ ಮುಂದುವರೆಸಿರುವ ಎಲ್ಲ ಶಾಲೆಗಳಿಗೆ ಬೀಗ ಜಡಿಯುವಂತೆ ಸರ್ಕಾರ ಆದೇಶಿಸಿದೆ.

ಕರ್ನಾಟಕ ಶಿಕ್ಷಣ ಕಾಯ್ದೆ ಅನು–ವಿಭಾಗ 30 ಮತ್ತು 31 ರಂತೆ ಶಾಲೆಗಳನ್ನು ನಡೆಸಲು ನೋಂದಣಿ ಕಡ್ಡಾಯವಾಗಿ ಮಾಡಿಕೊಳ್ಳಬೇಕಾಗಿದೆ. ಶಿಕ್ಷಣ ಇಲಾಖೆಯ ಜಿಲ್ಲಾಧಿಕಾರಿಗಳು ಈ ಸಂಬಂಧ ನೋಂದಣಿ ಪಡೆಯದಿರುವ ಶಾಲೆಗಳು ಇಲ್ಲದಿರುವ ಕುರಿತು ದೃಢೀಕರಣ ನೀಡಬೇಕಾಗಿದೆ. ಇದನ್ನು ಹೊರತುಪಡಿಸಿ ಅನಧಿಕೃತ ಶಾಲೆಗಳು ಕಂಡು ಬಂದರೆ ನೇರವಾಗಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಸರ್ಕಾರ ಎಚ್ಚರಿಸಿದೆ.

ನೋಂದಣಿ ಇಲ್ಲದೆ ಅನಧಿಕೃತವಾಗಿ ಉನ್ನತೀಕರಿಸಿರುವ ಶಾಲೆಗಳು ಇಲ್ಲದಿರುವಂತೆಯೂ ಸಹ ಜಿಲ್ಲಾ ಶಿಕ್ಷಣಾಧಿಕಾರಿಗಳಿಗೆ ದೃಢೀಕರಿಸಿ ಸರ್ಕಾರಕ್ಕೆ ಮಾಹಿತಿ ನೀಡಬೇಕು ಎಂದು ತಿಳಿಸಿರುವ ರಾಜ್ಯ ಶಿಕ್ಷಣ ಇಲಾಖೆ ರಾಜ್ಯ ಪಠ್ಯಕ್ರಮದಲ್ಲಿ ಬೋಧಿಸಲು ಅನುಮತಿ ಪಡೆದು ಅನಧಿಕೃತವಾಗಿ ಕೇಂದ್ರ ಪಠ್ಯ ಕ್ರಮದಲ್ಲಿ ಬೋಧಿಸುತ್ತಿರುವ ಶಾಲೆಗಳು ನಿಯಮಾನುಸಾರ ಸಂಯೋಜನೆ ಪಡೆಯುವವರೆಗೂ ಕಡ್ಡಾಯವಾಗಿ ರಾಜ್ಯ ಪಠ್ಯಕ್ರಮವನ್ನು ಬೋಧಿಸುವಂತೆ ಶಾಲೆಗಳಿಗೆ ನೋಟಿಸ್ ನೀಡಬೇಕು ಹಾಗೂ ಇದನ್ನು ಖಚಿತಪಡಿಸಿಕೊಂಡ ಕುರಿತಂತೆ ಆ. 14 ರೊಳಗೆ ವರದಿ ನೀಡುವಂತೆ ಸೂಚಿಸಿದೆ.

ಈ ಎಲ್ಲ ಕ್ರಮಗಳನ್ನು ಜಿಲ್ಲಾ ಉಪನಿರ್ದೇಶಕರು ತಮ್ಮ ಜಿಲ್ಲಾವ್ಯಾಪ್ತಿಯಲ್ಲಿರುವ ಅನಧಿಕೃತ ಶಾಲೆಗಳನ್ನು ಗುರುತಿಸಿ ನಿಯಮಾನುಸಾರ ಕ್ರಮಕೈಗೊಳ್ಳಬೇಕು. ಅನಧಿಕೃತ ಶಾಲೆ ಇಲ್ಲದಿರುವ ಕುರಿತು ಆ. 16ರೊಳಗೆ ದೃಢೀಕೃತ ವರದಿಯನ್ನು ಸರ್ಕಾರ–ಕ್ಕೆ ಸಲ್ಲಿಸಬೇಕು. ಒಂದು ವೇಳೆ ಈ ವಿಷಯಕ್ಕೆ ಸಂಬಂಧಿಸಿದಂತೆ ನಿರ್ಲಕ್ಷ್ಯ ಧೋರಣೆ ಕಂಡು ಬಂದರೆ ಅಧಿಕಾರಿಗಳ ಮೇಲೆ ಕರ್ತವ್ಯಲೋಪದಡಿ ಶಿಸ್ತು ಕ್ರಮಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಡಿಡಿಪಿಐಗೆ ರಾಜ್ಯಶಿಕ್ಷಣ ಇಲಾಖೆ ಎಚ್ಚರಿಸಿದೆ.

## ನೇರಲಗುಂಟೆ ಗ್ರಾ.ಪಂ. ಕಾಂಗ್ರೆಸ್ ತೆಕ್ಕೆಗೆ



**ನಾಯಕನಹಟ್ಟಿ :** ಹೋಬಳಿಯ ನೇರಲಗುಂಟೆ ಗ್ರಾಮ ಪಂಚಾಯಿತಿಯಲ್ಲಿ ನಡೆದ 2ನೇ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಎ.ಓ. ಗೋಪಾಲ್ ಅಧ್ಯಕ್ಷರಾಗಿ ಮತ್ತು ಉಪಾಧ್ಯಕ್ಷರಾಗಿ ದುರುಗಮ್ಮ ಆಯ್ಕೆಯಾಗಿದ್ದಾರೆ.

ನೇರಲಗುಂಟೆ ಗ್ರಾಮ ಪಂಚಾಯಿತಿಯ ಚುನಾವಣೆ ಅಧಿಕಾರಿಯಾಗಿ ಕೃಷಿ ಇಲಾಖೆಯ ಉಪನಿರ್ದೇಶಕರಾಗಿ ಸುರೇಶ್‌ಬಾಬ್, ಕೆ.ಶಿವಕುಮಾರ್ ಅಧಿಕಾರವನ್ನು ವಹಿಸಿಕೊಂಡರು. ಈ ಸಂದರ್ಭದಲ್ಲಿ ಗೆಲುವು ಪಡೆದ ನಂತರ ಕಾಂಗ್ರೆಸ್ ಮುಖಂಡರುಗಳು, ಯುವಕರು, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಈ ಸಂದರ್ಭದಲ್ಲಿ ಮುಖಂಡ ಸೂರನಾಯಕ ಪೊಲೀಸ್ ಇಲಾಖೆಯ ಪಿ.ಎಸ್.ಐ. ದೇವರಾಜ್, ಮತ್ತು ಸಿಬ್ಬಂದಿಗಳು, ಹಾಗೂ ನೇರಲಗುಂಟೆ ಗ್ರಾಮಸ್ಥರು, ಮುಖಂಡರು, ಯುವಕರು, ಇದ್ದರು.

## ಮಲ್ಲೂರಹಳ್ಳಿ ಗ್ರಾ.ಪಂ. ಅಧ್ಯಕ್ಷರಾಗಿ ದಳವಾಯಿ ಗೆಲುವು



**ನಾಯಕನಹಟ್ಟಿ :** ಹೋಬಳಿಯ ಮಲ್ಲೂರಹಳ್ಳಿ ಗ್ರಾಮ ಪಂಚಾಯಿತಿಯಲ್ಲಿ ನಡೆದ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು ಎರಡನೇ ಅವದಿಯ ಚುನಾವಣೆಯಲ್ಲಿ ಅಧ್ಯಕ್ಷರಾದ ದಳವಾಯಿ , ಉಪಾಧ್ಯಕ್ಷರಾಗಿ ಮಂಜುಳ ಬಸವರಾಜ್ ಆಯ್ಕೆ ಆಗಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನನ್ನ ಅಧ್ಯಕ್ಷ ಸ್ಥಾನಕ್ಕೆ ಬೆಂಬಲಿಸಿದ ಗ್ರಾಮ ಪಂಚಾಯಿತಿ ಸದಸ್ಯರಿಗೆ, ಉಪಾಧ್ಯಕ್ಷರಿಗೆ ಅಭಿನಂದನಗೆಳನ್ನು ಸಲ್ಲಿಸುತ್ತೇನೆ ಎಂದರು. ಮಲ್ಲೂರಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುವ ಎಲ್ಲಾ ಹಳ್ಳಿಗಳಿಗೆ ಅಭಿವೃದ್ದಿ ಕೆಲಸಗಳನ್ನು ಮಾಡುತ್ತೇನೆ ಎಂದು ಭರವಸೆ ನೀಡಿದರು.

ಮಲ್ಲೂರಹಳ್ಳಿ ಗ್ರಾಮ ಪಂಚಾಯಿತಿ ಚುನಾವಣೆ ಅಧಿಕಾರಿಯಾದ ಚಳ್ಳಕೆರೆ ಕೃಷಿ ಇಲಾಖೆ ಅಧಿಕಾರಿ ಆಶೋಕ್, ಮಲ್ಲೂರಹಳ್ಳಿ ಗ್ರಾಮ ಪಂಚಾಯಿತಿ ಪಿಡಿಓ ಇನಾಯತ್ ಬಾಷಾ, ಪೊಲೀಸ್ ಇಲಾಖೆಯವರು ಇದ್ದರು.

## ಫಾಸ್ಟ್ ನ್ಯೂಸ್

### ಲಾರಿಗೆ ಡಿಕ್ಕಿ ಐವರಿಗೆ ಗಾಯ

ರಾಮನಗರ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ತಿಟ್ಟಮಾರನಹಳ್ಳಿ ಗ್ರಾಮದ ಬಳಿ ಹಾಲು ಸಾಗಿಸುತ್ತಿದ್ದ ಲಾರಿಗೆ ಡಿಕ್ಕಿಯಾಗಿ ಕಾರು ರಸ್ತೆ ಪಕ್ಕ ಉರುಳಿಬಿದ್ದ ಘಟನೆ ನಡೆದಿದೆ. ಕಾರಿನಲ್ಲಿದ್ದ ಐವರಿಗೆ ಗಂಭೀರ ಗಾಯಗಳಾಗಿವೆ. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ಕೊಡಿಸಲಾಗುತ್ತಿದೆ. ಚನ್ನಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ತಿಪಟೂರು ಬಂದ್ ಬರಿದಾದ ರಸ್ತೆಗಳು

ಕೊಬ್ಬರಿಗೆ 20 ಸಾವಿರ ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ಇಂದು ತಿಪಟೂರು ಬಂದ್ ಮಾಡಲಾಗಿದೆ. ಅಂಗಡಿ ಮುಗ್ಗಟ್ಟು ಸಂಪೂರ್ಣವಾಗಿ ಮುಚ್ಚಲಾಗಿದ್ದು, ಮೆಡಿಕಲ್ ಸ್ಟೋರ್ ಅಗತ್ಯ ವಸ್ತುಗಳ ಅಂಗಡಿಗಳನ್ನ ಹೊರತುಪಡಿಸಿ ತಿಪಟೂರು ಸಂಪೂರ್ಣವಾಗಿ ಬಂದ್ ಆಗಿದೆ.

### ವ್ಯವಸ್ಥಾಪನಾ ಮಂಡಳಿ ಸದಸ್ಯರ ನೇಮಕ

KSOU ವ್ಯವಸ್ಥಾಪನಾ ಮಂಡಳಿ ಸದಸ್ಯರಾಗಿ ಶಾಸಕರನ್ನು ನೇಮಿಸಲಾಗಿದೆ. ಶಾಸಕರಾದ ಚಾಮರಾಜ ಶಾಸಕ ಹರೀಶ್‌ಗೌಡ, K.R. ನಗರ ಶಾಸಕ ರವಿಶಂಕರ್ ನೇಮಿಸಿ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ ಕುಲಸಚಿವ ಆದೇಶ ಹೊರಡಿಸಿದ್ದಾರೆ.

### ಮಗುವಿಗೆ ರೋಗನಿರೋಧಕ ಲಸಿಕೆಗಳನ್ನು ಹಾಕಿಸಿ

**ದಾವಣಗೆರೆ :** ತಾಯಂದಿರು ಜನಿಸಿದ ಮಗುವಿಗೆ ಕಾಲಕಾಲಕ್ಕೆ ಹಾಕಲಾಗುವ ರೋಗನಿರೋಧಕ ಲಸಿಕೆಗಳನ್ನು ಹಾಕಿಸಲಾಗಿದೆಯೇ ಎಂಬುದನ್ನು ಖಾತರಿಪಡಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ತಿಳಿಸಿದರು.

2010ರಲ್ಲಿ ವಿಶ್ವ ಆರೋಗ್ಯ ಸಂಸ್ಥೆಯು ಜುಲೈ 28 ರಂದು ವಿಶ್ವ ಹೆಪಟೈಟಿಸ್ ದಿನ ಎಂದು ಆಚರಿಸಲು ಕರೆ ನೀಡಿತು. ಕಾರಣ ಹೆಪಟೈಟಿಸ್ ವೈರಾಣುವನ್ನು ಮತ್ತು ಅದ–ಕ್ಕೆ ಲಸಿಕೆಯನ್ನು ಕಂಡು ಹಿಡಿದ ನೋಬೆಲ್ ಪ್ರಶಸ್ತಿ ವಿಜೇತ ಪ್ರೊಫೆಸರ್ ಬರೂಚ್ ಸಾಮ್ಯುಯಲ್ ಬ್ಲೂಮ್‌ಬರ್ಗ ಅವರ ಜನ್ಮ ದಿನವಾಗಿದೆ.

ದೀರ್ಘಕಾಲದ ಸೋಂಕುಗಳಿಗೆ ಶೇಕಡಾ 90 ಪ್ರತಿಶತ ಚಿಕಿತ್ಸೆಗಳನ್ನು ಪತ್ತೆ ಹಚ್ಚುವುದು ಹಾಗೂ ಸಿರೋಸಿಸ್ ಮತ್ತು ಕ್ಯಾನ್ಸರ್‌ನಿಂದ ಆಗುವ ಮರಣಗಳನ್ನು ಶೇಕಡಾ 65 ಪ್ರತಿಶತ ಕಡಿಮೆ ಮಾಡುವುದಾಗಿದ್ದು ಈ ನಿಟ್ಟಿನಲ್ಲಿ ಕೆಲಸ ಮಾಡುವುದರ ಮೂಲಕ ಆರೋಗ್ಯವಂತ ಸಮಾಜವನ್ನು ನಿರ್ಮಿಸಬೇಕು.

ಹೆಪಟೈಟಿಸ್ ವೈರಾಣು ಬಹಳ ದಿನಗಳ ನಂತರ ರೋಗದ ಲಕ್ಷಣಗಳನ್ನು ತೋರ್ಪಡಿಸುತ್ತದೆ. ವಿಶ್ವದಾದ್ಯಂತ 1 ವರ್ಷದಲ್ಲಿ ಹತ್ತು ಲಕ್ಷಕ್ಕಿಂತ ಹೆಚ್ಚು ಜನರು ಈ ವೈರಾಣುವಿಗೆ ತುತ್ತಾಗುತ್ತಾ ಇದ್ದಾರೆ. ಆದ್ದರಿಂದ ಇದನ್ನು ತಡೆಗಟ್ಟಲು ಹೆಚ್ಚಿನ ಕ್ರಮ ಕೈಗೊಳ್ಳಬೇಕು ಮತ್ತು ಜನರಿಗೆ ವೈರಾಣು ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕು. ಕ. ಅಧಿಕಾರಿ ಡಾ. ನಾಗರಾಜ್ ಮಾತನಾಡಿ ಹೆಪಟೈಟಿಸ್ ರೋಗವನ್ನು ಸಾಮಾನ್ಯವಾಗಿ ಜಾಂಡಿಸ್, ಕಾಮಲೆ ರೋಗ ಎಂದು ಕರೆಯುತ್ತಾರೆ. ಜನರಿಗೆ ಈ ಕಾಯಿಲೆ ಲಕ್ಷಣಗಳು, ಪರಿಣಾಮಗಳು, ಚಿಕಿತ್ಸೆ ಹಾಗೂ ತಡೆಗಟ್ಟುವ ಕ್ರಮಗಳ ಕುರಿತು ಜನರಿಗೆ ಜಾಗೃತಿ ಮೂಡಿಸುವುದು ಕಾರ್ಯಕ್ರಮದ ಮೂಲ ಉದ್ದೇಶವಾಗಿದೆ.

ಹೆಪಟೈಟಿಸ್ ಬಿ.ಸಿ ಹೆಚ್ಚು ಅಪಾಯಕಾರಿ ವೈರಾಣುವಾಗಿದ್ದು, ಮೊದಲು ಇದಕ್ಕೆ ಚಿಕಿತ್ಸೆ ಪಡೆಯಲು ಬೇರೆಡೆ ಹೋಗಬೇಕಾಗಿತ್ತು ಆದರೆ ಈಗ ಇಲ್ಲಿಯೇ ಪೂರ್ಣ ಪ್ರಮಾಣದ ಚಿಕಿತ್ಸೆ ನೀಡಲಾಗುತ್ತಿದೆ ಆದ್ದರಿಂದ ಜನರು ಅಲಕ್ಷ ಮಾಡದೇ ಪ್ರಾಥಮಿಕ ಹಂತದಲ್ಲಿಯೇ ತಾಲ್ಲೂಕು ಅಥವಾ ಜಿಲ್ಲಾ ಆಸ್ಪತ್ರೆಯಲ್ಲಿ ಪರೀಕ್ಷಿಸಿಕೊಂಡು ಚಿಕಿತ್ಸೆ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಶಸ್ತ್ರ ಚಿಕಿತ್ಸಾಕ ಡಾ. ಸುಭಾಷ್‌ಚಂದ್ರ, ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಮೀನಾಕ್ಷಿ, ಜಿಲ್ಲಾ ಮಲೇರಿಯಾಧಿಕಾರಿ ಡಾ.ನಟರಾಜ್. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ದೇವರಾಜ್ ಇತರರು ಉಪಸ್ಥಿತರಿದ್ದರು.

### ವಿವಿಧ ಹುದ್ದೆಗಳಿಗೆ ಅರ್ಜಿ

**ಚಿತ್ರದುರ್ಗ :** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗದವರು ಜೂನಿಯರ್ ಇಂಜಿನಿಯರ್ ಸಿವಿಲ್, ಮೆಕ್ಯಾನಿಕಲ್, ಎಲೆಕ್ಟ್ರಿಕಲ್ ಮತ್ತು ಕ್ವಾಂಟಿಟಿ ಸರ್ವೇಯಿಂಗ್ ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 16 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ವಿದ್ಯಾರ್ಹತೆ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ಪಡೆದಿರಬೇಕು. ವಯೋಮಿತಿ 18 ರಿಂದ 32 ವರ್ಷದೊಳಗಿರಬೇಕು. 2023ರ ಅಕ್ಟೋಬರ್ ತಿಂಗಳಿನಲ್ಲಿ ಪರೀಕ್ಷೆ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗದ **https://ssc.nic.in** ಅಥವಾ **www.ssckkr.kar.nic.in** ವೆಬ್‌ಸೈಟ್ ಗೆ ಭೇಟಿ ನೀಡಿಬಹುದು ಹಾಗೂ ಸಿಬ್ಬಂದಿ ನೇಮಕಾತಿ ಆಯೋಗದ ದೂರವಾಣಿ ಸಂಖ್ಯೆ 080–25502520, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂರವಾಣಿ ಸಂಖ್ಯೆ 7022459064, 9945587060 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಬುದ್ಧನ ಆಲೋಚನೆ ದೇಶಕ್ಕೆ ಬೇಕು : ಪ್ರೊ.ಸಿ.ಕೆ.ಎಂ



ಆ.13 ರಂದು ಚಿತ್ರದುರ್ಗದಲ್ಲಿ ನಡೆಯುವ ಧಮ್ಮ ಸಾಹಿತ್ಯ ಸಮ್ಮೇಳನ ಕುರಿತು ಪ್ರೊ.ಸಿ.ಕೆ.ಮಹೇಶ್ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.

**ಚಿತ್ರದುರ್ಗ :** ಬುದ್ಧನ ಆರ್ಥಿಕ ಚಿಂತನೆ ಈ ದೇಶದ ಆರ್ಥಿಕ ಚಿಂತನೆಯಾಗಿ ಪರಿವರ್ತನೆಗೊಂಡಾಗ ಮಾತ್ರ ಭಾರತದಲ್ಲಿ ಬಡವ–ಶ್ರೀಮಂತ ಎನ್ನುವ ತಾರತಮ್ಯ ನಿವಾರಣೆಯಾಗಲು ಸಾಧ್ಯ ಎಂದು ನವಯಾನ ಬುದ್ಧ ಸಂಘದ ಉಪಾಸಕ ಪ್ರೊ.ಸಿ.ಕೆ.ಮಹೇಶ್ ಹೇಳಿದರು.

ನವಯಾನ ಬುದ್ಧ ಸಂಘದಿಂದ ಆ.13 ರಂದು ಕ್ರೀಡಾಭವನದಲ್ಲಿ ನಡೆಯುವ ಧಮ್ಮ ಸಾಹಿತ್ಯ ಸಮ್ಮೇಳನ ಬುದ್ಧನ ಚಿಂತನೆ ಮತ್ತು ವಿಚಾರ ಸಂಕಿರಣದ ಅಂಗವಾಗಿ ಪ್ರವಾಸಿ ಮಂದಿರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು ಖಾಸಗಿಕರಣ, ಉದಾರಿಕರಣ, ಜಾಗತೀಕರಣದಿಂದ ಮನುಷ್ಯನ ಬದುಕು ದುಸ್ತರವಾಗಿದೆ. ಬುದ್ಧ ಅಂದಿನ ಕಾಲದಲ್ಲಿಯೇ ಕೃಷಿ ಆಧಾರಿತ ನೀತಿಯನ್ನು ಪ್ರತಿಪಾದಿಸಿ ಆಳುವ ಸರ್ಕಾರಗಳು ರೈತನಿಗೆ ಬೀಜ, ರಸಗೊಬ್ಬರ, ಕೃಷಿ ಪರಿಕರಗಳನ್ನು ನೀಡಬೇಕು ಎಂದಿದ್ದರು.

ಬುದ್ಧನ ಆಲೋಚನೆ ದೇಶಕ್ಕೆ ಬೇಕು. ಜರ್ಮನ್, ಇಂಗ್ಲೆಂಡ್, ರಷ್ಯಾ, ಜಪಾನ್‌ನಲ್ಲಿ ಬುದ್ಧನ ಆಲೋಚನೆಗಳಿವೆ. ಹಿಂದೂ ಧರ್ಮದ ಒಳಗಿನ ಜಾತಿ ವ್ಯವಸ್ಥೆಯಿಂದ ಶೋಷಿತರು, ದಲಿತರನ್ನು ಹೊರತಂದು ಬುದ್ಧನ ಚಿಂತನೆಗಳನ್ನು ಮೈಗೂಡಿಸಿಕೊಳ್ಳುವಂತೆ ಜಾಗೃತಿ ಮೂಡಿಸುವುದಕ್ಕಾಗಿ ಧಮ್ಮ ಸಾಹಿತ್ಯ ಸಮ್ಮೇಳನ ಏರ್ಪಡಿಸಲಾಗಿದೆ ಎಂದು ತಿಳಿಸಿದರು.

ಬ್ರಾಹ್ಮಣ್ಯ ವ್ಯವಸ್ಥೆಗೆ ಬುದ್ಧನ ಚಿಂತನೆಯಿಂದ ಮಾತ್ರ ತಕ್ಕ ಉತ್ತರ ಸಿಗುತ್ತದೆ. ಸಾಮಾಜಿಕ ಸವಾಲುಗಳಿಗೆ ಬುದ್ಧ ಸಾಹಿತ್ಯದಲ್ಲಿ ಪರಿಹಾರವಿದೆ. ಹಾಗಾಗಿ ರಾಜ್ಯದಲ್ಲಿಯೇ ಮೊಟ್ಟ ಮೊದಲ ಧಮ್ಮ ಸಾಹಿತ್ಯ ಸಮ್ಮೇಳವನ್ನು ಚಿತ್ರದುರ್ಗದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯಸಭಾ ಸದಸ್ಯ ಎಲ್.ಹನುಮಂತಯ್ಯ ಸಮ್ಮೇಳನ ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪ್ರಾಧ್ಯಾಪಕ ಹೆಚ್.ಟಿ.ಪೋತೆ, ಲೇಖಕ ಬಿ.ಟಿ.ಜಾಹ್ನವಿ ಆಗಮಿಸಲಿದ್ದು, ಮಾಜಿ ಸಚಿವ ಹೆಚ್.ಆಂಜನೇಯ ಅಧ್ಯಕ್ಷತೆ ವಹಿಸಲಿದ್ದಾರೆ.

ಬುದ್ಧನ ರಾಜಕೀಯ ತತ್ವಜ್ಞಾನ, ಬುದ್ಧ ಪ್ರಣೀತ ಆರ್ಥಿಕ ಚಿಂತನೆ, ಬೌದ್ಧ ಧಮ್ಮದ ಸಾಮಾಜಿಕ ಆಶಯ, ಬುದ್ಧ ಮತ್ತು ಆತನ ಧಮ್ಮದ ತಾತ್ವಿಕ ನೆಲೆ ಎಂಬ ವಿಚಾರಗಳ ಕುರಿತು ಗೋಷ್ಠಿಗಳು ನಡೆಯಲಿದೆ.

ಸಂಜೆ ನಾಲ್ಕು ಗಂಟೆಗೆ ಸಮಾರೋಪ ಸಮಾರಂಭದಲ್ಲಿ ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಜಿ.ಎಸ್.ಮಂಜುನಾಥ್, ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ಎಂ.ಮಲ್ಲಿಕಾರ್ಜುನ್ ಹಿರೇಹಳ್ಳಿ, ಶಂಕರ್, ಇಮ್ತಿಯಾಜ್ ಹುಸೇನ್, ಸಿ.ಕೆ.ಗೋಪಾಲಕೃಷ್ಣ, ಟಿ.ರಾಮು, ಬಿ.ಮಲ್ಲಿಕಾರ್ಜುನ್, ಎಂ.ಶ್ರೀನಿವಾಸ್, ಕಸವನಹಳ್ಳಿ ಶಿವಣ್ಣ, ಡಿ.ಯಲ್ಲಪ್ಪ ಇನ್ನು ಅನೇಕರು ಮಾತನಾಡುವವರು ಎಂದು ಪ್ರೊ.ಸಿ.ಕೆ.ಮಹೇಶ್ ನುಡಿದರು.

ನವಯಾನ ಬುದ್ಧ ಸಂಘದ ಉಪಾಸಕರುಗಳಾದ ಕೆ.ಕುಮಾರ್, ಡಿ.ದುರುಗೇಶ್, ರಾಮು ಗೋಸಾಯಿ, ಹೆಚ್. ಆನಂದ್‌ಕುಮಾರ್ ಇವರುಗಳು ಪತ್ರಿಕಾಗೋಷ್ಠಿಯಲ್ಲಿ ಹಾಜರಿದ್ದರು.

# ಹೆಲ್ಪ್ ಡೆಸ್ಕ್ ತೆರೆದ ಪುರಸಭೆ




**ಹೊಸದುರ್ಗ :** ಹೊಸದುರ್ಗ ಪಟ್ಟಣದ ಪುರಸಭೆ ಹಲವು ಮೂಲಭೂತ ಸೌಲಭ್ಯ ನೀಡುತ್ತಿದ್ದು ಕುಡಿಯುವ ನೀರು, ಸ್ವಚ್ಛತೆ ಮತ್ತು ಬೀದಿ ದೀಪ ನಿರ್ವಹಣೆ ಇತರೆ ಪ್ರಮುಖ ಕೆಲಸಗಳನ್ನು ಸಮರ್ಪಕವಾಗಿ ನಿರ್ವಹಿಸುತ್ತಿದ್ದು ಪಟ್ಟಣ ವ್ಯಾಪ್ತಿಯಲ್ಲಿ ಸುಮಾರು 14 ಸಾವಿರಕ್ಕೂ ಹೆಚ್ಚು ನಿವೇಶನ, ಕಟ್ಟಡಗಳು ಇದ್ದು ಸಾರ್ವಜನಿಕರು ಸ್ವಯಂಘೋಷಿತ ಆಸ್ತಿ ತೆ–ರಿಗೆ ಪದ್ಧತಿ ಅಳವಡಿಸಿಕೊಂಡು ತೆರಿಗೆ ಪಾವತಿಸುತ್ತ ಪಟ್ಟಣದ ಅಭಿವೃದ್ಧಿಗೆ ಸಹಕರಿಸುತ್ತ ಬಂದಿದ್ದು ಆಸ್ತಿ ದಾಖಲೆಗಳನ್ನು ಸರಳಿಕರಣಗೊಳಿಸಲು ಮತ್ತು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಇ–ಆಸ್ತಿ ಹೆಲ್ಪ್‌ಡೆಸ್ಕ್ ತೆರೆಯಲು ಜಿಲ್ಲಾ ಯೋಜನಾ ನಿರ್ದೇಶಕರಾದ ಮಹೇಂದ್ರಕುಮಾರ್ ಸೂಚನೆ ನೀಡಿರುವಂತೆ ಪುರಸಭೆಯಲ್ಲಿ ಹೆಲ್ಪ್‌ಡೆಸ್ಕ್ ಕೌಂಟರ್ ತೆರೆದು ಹೊಸದಾಗಿ ಇ–ಸ್ವತ್ತು ನೊಂದಣಿ ಪ್ರಕ್ರಿಯೆ ಪ್ರಾರಂಬಿಸಿ ಸಾರ್ವಜನಿಕರಿಗೆ ಮುಖ್ಯಾಧಿಕಾರಿ ತಿಮ್ಮರಾಜು ಜಿ.ವಿ ತಿಳಿಸಿದರು.

ಸಾರ್ವಜನಿಕರು ಹೊಸದುರ್ಗ ಪುರಸಭೆಯ ಹೆಲ್ಪ್‌ಡೆಸ್ಕ್ ಮುಖಾಂತರ ಹಾಗೂ ಕರ್ನಾಟಕ ಓನ್ ಸೆಂಟರ್ ಮುಖಾಂತರ ಅಗತ್ಯ ದಾಖಲಾತಿಗಳನ್ನು ಒದಗಿಸಿ ಅರ್ಜಿಯನ್ನು ಸಲ್ಲಿಸಬಹುದಾಗಿದ್ದು ನಿಗಧಿತ ಕಾಲಮಿತಿಯೊಳಗೆ ಇ–ಸ್ವತ್ತನ್ನು ಪಡೆಯ ಬಹುದಾಗಿರ ಎಂಬ ಅಂಶವನ್ನು ಕಂದಾಯ ನಿರೀಕ್ಷರಾದ ಜಿ.ಎನ್ ಕುಮಾರ್ ರವರು ತಿಳಿಸಿದರು.

ಈ ಸಂದರ್ಭದಲ್ಲಿ ವಿಷಯ ನಿರ್ವಾಹಕರಾದ ಸಾವಿತ್ರಿ, ಲಿಂಗರಾಜು ವಿನಯ್, ತಿಪ್ಪೇಶ್ ಮತ್ತು ಜಾಫರ್ ದೇವೆಂದ್ರಪ್ಪ ಹಾಜರಿದ್ದರು.

# ರಾಂಪುರ ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕರ ಅವಿರೋಧವಾಗಿ ಆಯ್ಕೆ



**ಮೊಳಕಾಲ್ಮುರು :** ತಾಲೂಕಿನ ರಾಂಪುರ ಗ್ರಾಮ ಪಂಚಾಯಿತಿಯ ಎರಡನೇ ಅವಧಿಗೆ ಬುಧವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಟಿ ನಾಗವೇಣಿ ಉಪಾಧ್ಯಕ್ಷರಾಗಿ ಅನಂತಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ
28 ಸದಸ್ಯರುಳ್ಳ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನವು ಎಸ್ ಟಿ ಮಹಿಳೆ ಉಪಾಧ್ಯಕ್ಷ ಸ್ಥಾನವು ಎಸ್ ಟಿ ಪಂಗಡಕ್ಕೆ ಮೀಸಲಿತ್ತು. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ ತಲಾ ಒಬ್ಬರು ಮಾತ್ರ ನಾಮಪತ್ರ ಸಲ್ಲಿಸಿದ್ದ ಕಾರಣ ಇಬ್ಬರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.
ಚುನಾವಣಾ ಅಧಿಕಾರಿಯಾಗಿ ಸಿಡಿಪಿಓ ನವೀನ್ ಕುಮಾರ್ ಉಪತಹಸಿಲ್ದಾರ್ ಮಹಾಂತೇಶ್ ಸಿಬ್ಬಂದಿ ತಿಪ್ಪೇಸ್ವಾಮಿ ಕರ್ತವ್ಯ ನಿರ್ವಹಿಸಿದರು..
ಸ್ಥಳದಲ್ಲಿ ಶಾಸಕ ಎನ್ ವೈ ಗೋಪಾಲಕೃಷ್ಣ ಪಿಡಿಓ ಎನ್ ಗುಂಡಪ್ಪ, ಸದಸ್ಯರಾದ ಪರಮೇಶಪ್ಪ ಎನ್ ತಿಪ್ಪೇಸ್ವಾಮಿ ಅಬ್ದುಲ್ಲಾ ರೆಹಮಾನ್ ಅಶ್ವಿನಿ ತಿಪ್ಪೇಸ್ವಾಮಿ ಬಸವರಾಜ್ ಚಿನ್ನ ರೆಡ್ಡಿ ನೀಲಮ್ಮ ಧನಲಕ್ಷ್ಮಿ ದಿದೆನಗೌಡ ಗೀತಮ್ಮ ಗೌರಮ್ಮ ಹೀನ ಜಯಮ್ಮ ಲೋಕೇಶ್ ರೆಡ್ಡಿ ಶಿಲ್ಪ ಶ್ರೀಕಾಂತ್ ರೆಡ್ಡಿ ಕೌಸರ್ ಕೃಷ್ಣಮೂರ್ತಿ ರವಿ ರೆಹಮತುಲ್ಲಾ ಶಿವರಾಜ್ ಶ್ರೀಕಲ ಸುಜಾತ ತಿಪ್ಪಮ್ಮ ಮುಂತಾದವರು ಉಪಸ್ಥಿತರಿದ್ದರು

# ಕೋನಸಾಗರ ಗ್ರಾಪಂ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



**ಮೊಳಕಾಲ್ಮುರು :** ತಾಲೂಕಿನ ಕೋನಸಾಗರ ಗ್ರಾಪಂ ಎರಡನೇ ಅವಧಿಯ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಬುಧವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಪಿ.ರಾಮಮೂರ್ತಿ ಚುನಾವಣೆ ಮೂಲಕ ಆಯ್ಕೆಯಾದರೆ ಇನ್ನು ಉಪಾಧ್ಯಕ್ಷರಾಗಿ ಸಿದ್ದಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಪ್ರಕಟಿಸಿದರು
21 ಸದಸ್ಯರ ಬಲವುಳ್ಳ ಈ ಗ್ರಾಪಂ ಅಧ್ಯಕ್ಷ ಸ್ಥಾನವು ಎಸ್‌ಟಿ, ಉಪಾಧ್ಯಕ್ಷ ಸ್ಥಾನವು ಎಸ್‌ಟಿ(ಮಹಿಳೆ)ಗ ಮೀಸಲಿತ್ತು, ಅಧ್ಯಕ್ಷ ಸ್ಥಾನಕ್ಕೆ ಪಿ.ರಾಮಮೂರ್ತಿ ಹಾಗೂ ಸಿಟಿ.ತಿಪ್ಪೆಸ್ವಾಮಿ ಇಬ್ಬರು ನಾಮಪತ್ರ ಸಲ್ಲಿಸಿದ್ದರು
ಚುನಾವಣೆಯಲ್ಲಿ ರಾಮಮೂರ್ತಿಗೆ 12. ತಿಪ್ಪೇಸ್ವಾಮಿಗೆ 09 ಮತಗಳು ಚಲಾವಣೆಯಾದ್ದರಿಂದ ಪಿ.ರಾಮಮೂರ್ತಿ ಅಧ್ಯಕ್ಷರಾಗಿ ಆಯ್ಕೆಯಾದರು, ಉಪಾಧ್ಯಕ್ಷ ಸ್ಥಾನಕ್ಕೆ ಒಬ್ಬರೇ ನಾಮಪತ್ರ ಸಲ್ಲಿಸಿದ ಕಾರಣ ಸಿದ್ದಮ್ಮ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.
ಚುನಾವಣಾಧಿಕಾರಿಯಾಗಿ ತಾಪಂ ಪ್ರಭಾರ ಇಒ ಎಚ್.ಗಣೇಶ್, ಸಹಾಯಕರಾಗಿ ತಾಪಂ ವ್ಯವಸ್ಥಾಪಕ ನಂದೀಶ್, ಸಿಬ್ಬಂಧಿ ವಿಜಯಕುಮಾರ್ ಕರ್ತವ್ಯ ನಿರ್ವಹಿಸಿದರು.
ಸಂದರ್ಭದಲ್ಲಿ ಪಿಡಿಒ ಬಸವರಾಜ್ ಮುಖಂಡರಾದ ಎಸ್.ಖಾದರ್, ಜಿಎನ್. ಜಗದೀಶ್, ಬಡೋಬಯ್ಯ, ಮಣಿಕಂಠ ಗ್ರಾಪಂ ಸದಸ್ಯರಾದ ನಾಗರಾಜ್, ರತ್ನಮ್ಮ, ರೇಣುಕಮ್ಮ, ಬಾಲಮ್ಮ, ಮಲಲಿಕಾರ್ಜುನ್, ಸಣ್ಣ ಪಾಲಯ್ಯ, ರೇವಣ್ಣ, ತಿಪ್ಪೇಸ್ವಾಮಿ, ಶಿವಮ್ಮ, ಮಹಂತಮ್ಮ, ಬಸವರಾಜ್ ಸುಧಾ, ಅಣ್ಣಪ್ಪ ಸ್ವಾಮಿ, ವೀರೇಶ್, ಮಲಮ್ಮ, ಗಂಗಮ್ಮ, ಸೂರಯ್ಯ, ಶಿವಮ್ಮ, ಕವಿತಮ್ಮ ಇದ್ದರು.

# ವಾಂತಿಭೇದಿಗೆ ಭಯ ಪಡಬೇಡಿ, ಸ್ವಚ್ಚತೆಗೆ ಆದ್ಯತೆ ನೀಡಿ



ಚಿತ್ರದುರ್ಗ:ವಾಂತಿಭೇದಿ ಭಯಪಡುವುದು ಬೇಡ. ಶುದ್ಧ ನೀರು, ಬಿಸಿಬಿಸಿಯಾದ ಆಹಾರ ಸೇವನೆ, ಪರಿಸರ ಸ್ವಚ್ಛತೆಯ ಬಗ್ಗೆ ಗಮನಹರಿಸಿ ಎಂದು ಟಿಹೆಚ್‌ಓ ಡಾ.ಬಿ.ವಿ.ಗಿರೀಶ್ ಹೇಳಿದರು.
ಚಿತ್ರದುರ್ಗ ತಾಲ್ಲೂಕಿನ ಮುದ್ದಾಪುರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯ ಹೊಸಹಟ್ಟಿ ಗ್ರಾಮದಲ್ಲಿ ಮೂರು ದಿನಗಳ ಹಿಂದೆ ನಾಲ್ಕು ಜನರಿಗೆ ವಾಂತಿಭೇದಿ ಪ್ರಕರಣ ಕಂಡು ಬಂದು, ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದ ವರದಿ ಪಡೆದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಅಧಿಕಾರಿಗಳ ತಂಡ ಹೊಸಹಟ್ಟಿ ಗ್ರಾಮಕ್ಕೆ ಭೇಟಿ ನೀಡಿ ವಾಂತಿಬೇದಿ ನಿಯಂತ್ರಣ ಮತ್ತು ಮುಂಜಾಗ್ರತಾ ಕ್ರಮ ಜರುಗಿಸಿತು.
ಗ್ರಾಮದ ವಾಲ್ಮೀಕಿ ಭವನದಲ್ಲಿ ಚುನಾಯಿತ ಪ್ರತಿನಿಧಿಗಳು, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ಗ್ರಾಮಸ್ಥರನ್ನು ಸೇರಿಸಿ ಪ್ರಕರಣದ ಘಟನೆಯ ಬಗ್ಗೆ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿ.ವಿ. ಗಿರೀಶ್ ವಿವರಿಸಿ, ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಂತಹ ನಾಲ್ಕು ಜನರ ಗುಣ ಮುಖರಾಗಿದ್ದಾರೆ. ಮೂರು ಜನ ಮನೆಗೆ ಹಿಂತಿರುಗಿದ್ದಾರೆ. ಒಬ್ಬರು ಸುಧಾರಿಸಿಕೊಂಡು ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದರು.
ಆಶಾ ಕಾರ್ಯಕರ್ತರಿಗೆ ಮನೆಮನೆ ಸಮೀಕ್ಷೆ ನಡೆಸಿ ಶುಚಿತ್ವದ ಬಗ್ಗೆ ಆರೋಗ್ಯ ಶಿಕ್ಷಣ ನೀಡಲು ಓ ಆರ್ ಎಸ್ ಪೊಟ್ಟಣಗಳನ್ನ ಬಳಸುವ ರೀತಿಯನ್ನು ತಿಳಿಸಿಕೊಡಲು ಉಪ್ಪು ಸಕ್ಕರೆಯ ದ್ರಾವಣವನ್ನು ಮಾಡಿಕೊಳ್ಳುವ ಬಗೆಯನ್ನು ತಿಳಿಸಲು ಸೂಚಿಸಿದರು.
ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಿ.ಕೃಷ್ಣಮೂರ್ತಿ, ಕಾರ್ಯದರ್ಶಿ ಕೆ.ಕೃಷ್ಣಮೂರ್ತಿ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಂಗಾರೆಡ್ಡಿ, ಶ್ರೀಧರ್ ಗ್ರಾಮ ಪಂಚಾಯತಿ ಸದಸ್ಯರು, ಗ್ರಾಮಸ್ಥರು, ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

# ಗ್ರಾ.ಪಂ. ಮಟ್ಟದಲ್ಲಿ ಗೃಹಲಕ್ಷ್ಮಿ ಕಾರ್ಯಕ್ರಮ



**ಬೆಂಗಳೂರು :** ಪ್ರತಿಯೊಂದು ವಾರ್ಡ್, ಬೂತ್ ಹಾಗೂ ಗ್ರಾಮಪಂಚಾಯಿತಿ ಮಟ್ಟದಲ್ಲಿ ಗೃಹಲಕ್ಷ್ಮಿ ಕಾರ್ಯಕ್ರಮ ಆಯೋಜಿಸುತ್ತೇವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಇದೇ ವೇಳೆ ವಿಧಾನ ಸಭಾ ಚುನಾವಣೆ ಯಲ್ಲಿ ಕಾಂಗ್ರೆಸ್ ಪಕ್ಷ 136 ಕ್ಷೇತ್ರಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಹೇಳಿದ್ದಕ್ಕಾಗಿ ತಮ್ಮನ್ನು ಮೆಂಟಲ್ ಎಂದು ಕೆಲವರು ಕರೆದಿದ್ದ ಕ್ಷಣವನ್ನು ಅವರು ಮೆಲುಕು ಹಾಕಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ಕ್ವಿಟ್ ಇಂಡಿಯಾ ಚಳವಳಿ 82 ನೇ ವರ್ಷಾಚರಣೆ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭಾಗ್ಯಾದ ಲಕ್ಷ್ಮಿ ಬಾರಮ್ಮ ಹಾಡನ್ನು ಹಾಡಿದರು. ಬೆಳಗಾವಿಯಲ್ಲಿ ಗೃಹಲಕ್ಷ್ಮಿ ಕಾರ್ಯಕ್ರಮ ಉದ್ಘಾಟನೆಯಾಗಲಿದೆ. ಅದರ ನೇರ ಪ್ರಸಾರ ಫಲಾನುಭವಿಗಳನ್ನು ಒಂದೆಡೆ ಸೇರಿಸಿ ಪಂಚಾಯ್ತಿಯಲ್ಲೂ ಗೃಹಲಕ್ಷ್ಮಿ ಕಾರ್ಯಕ್ರಮ ಆಯೋಜಿಸುತ್ತೇವೆ. ಮಾಟ–ಮಂತ್ರದಿಂದ ಸರ್ಕಾರ ರಚನೆಮಾಡಿದ್ದೇವೆ ಎಂದು ವಿಪಕ್ಷ ನಾಯಕರೊಬ್ಬರು ಹೇಳಿಕೆ ನೀಡಿದ್ದಾರೆ.ಅವರ ಹೆಸರು ಪ್ರಸ್ತಾಪಿಸದೆ ಕುಮಾರಸ್ವಾಮಿಗೆ ತಿರುಗೇಟು ನೀಡಿದ್ದಾರೆ.

ಕ್ವಿಟ್ ಇಂಡಿಯಾ ಮಾದರಿ ಚಳವಳಿ ಅಗತ್ಯವಿದ್ದು, ಅಂದು ಬ್ರಿಟಿಷರ ವಿರುದ್ಧ ನಾವು ಹೋರಾಟ ಮಾಡಿದ್ದೆವು. ಇಂದು

ಕೋಮುವಾದ ಸರ್ವಾಧಿಕಾರದ ವಿರುದ್ಧ ಹೋರಾಟ ನಡೆಸಿ ಬಿಜೆಪಿ ಮುಕ್ತ ಭಾರತ ಮಾಡಬೇಕಾಗಿದೆ ಎಂದು ಕರೆ ಕೊಟ್ಟರು.

## ಫಾಸ್ಟ್ ನ್ಯೂಸ್

### ಮೇರಿ ಮಾತಿ ಮೇರಾ ದೇಶ್ ಕಾರ್ಯಾಚರಣೆ

**ದಾವಣಗೆರೆ :** ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂತಿಮ ಘಟ್ಟವಾಗಿ ಮೇರಿ ಮಾತಿ ಮೇರಾ ದೇಶ್ ಪರಿಕಲ್ಪನೆಯಡಿ ದೇಶಾದ್ಯಂತ ಆಗಸ್ಟ್ 9 ರಿಂದ 15 ರವರೆಗೆ ಸರ್ವೋಚ್ಚ ತ್ಯಾಗಗೈದ ಭಾರತ ಮಾತೆಯ ವೀರ ಪುತ್ರರಿಗಾಗಿ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ವೀರ ಪುತ್ರರಿಗೆ ಗೌರವ ಅರ್ಪಿಸಿ, ಅವರ ಸ್ಮರಣಾರ್ಥ ಶಿಲಾಫಲಕಂ ಸ್ಥಾಪಿಸುವ ವಿವಿಧ ಕಾರ್ಯಕ್ರಮಗಳನ್ನು ರೂಪಿಸಲಾಗಿದ್ದು, ಸ್ವಾತಂತ್ರ್ಯ ಹೋರಾಟಗಾರರು ಸೇನೆಯ ಶೌರ್ಯಪ್ರಶಸ್ತಿ ವಿಜೇತರು, ಸಶಸ್ತ್ರಪಡೆಗಳ ಹುತಾತ್ಮ ವೀರ ನಾರಿಯರು, ಸೈನಿಕರು ಮತ್ತು ಮಾಜಿ ಸೈನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜಾಲತಾಣ **https://yuva.gov.in./meri_maati_mera_desh** ಸಂಪರ್ಕಿಸಲು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಶಿವಮೊಗ್ಗ ಕಚೇರಿ, ಉಪನಿರ್ದೇಶಕ(ಪ್ರಭಾರ) ಡಾ. ಸಿ.ಎ. ಹಿರೇಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಗುತ್ತಿಗೆ ಆಧಾರದ ನೇಮಕಕ್ಕೆ ಅರ್ಜಿ ಆಹ್ವಾನ

**ಚಿತ್ರದುರ್ಗ :** ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆಯಲ್ಲಿ ಖಾಲಿ ಇರುವ ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 20 ಅರ್ಜಿ ಸಲ್ಲಿಸಲು ಕೊನೆಯ ದಿನ.

ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ಇಲಾಖೆ, ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 07 ಸಹಾಯಕ ಸರ್ಕಾರಿ ಅಭಿಯೋಜಕರು–ವ–ಸಹಾಯಕ ಸರ್ಕಾರಿ ವಕೀಲರ ಹುದ್ದೆಗಳು ಖಾಲಿ ಇದ್ದು, ಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ಭರ್ತಿ ಮಾಡುವುದಕ್ಕೆ ಸರ್ಕಾರ ಆದೇಶಿಸಿದ್ದು, ಸಹಾಯಕ ಸರ್ಕಾರಿ ಅಭಿಯೋಜಕರ ನೇಮಕಾತಿ ನಿಯಮಗಳು 2012ರಲ್ಲಿ ನಿಗದಿಪಡಿಸಲಾಗಿರುವ ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯ ಅನುಸಾರ ಅರ್ಹವಿರುವ ವಕೀಲರುಗಳು (ಅಭ್ಯರ್ಥಿಗಳು) ಅರ್ಜಿಯನ್ನು ಇದೇ ಆಗಸ್ಟ್ 20 ರೊಳಗಾಗಿ ಸರ್ಕಾರಿ ಅಭಿಯೋಜಕರ ಕಚೇರಿ, ಜಿಲ್ಲಾ ನ್ಯಾಯಾಲಯ ಸಂಕೀರ್ಣ, ಚಿತ್ರದುರ್ಗ ಈ ವಿಳಾಸಕ್ಕೆ ಸಲ್ಲಿಸಬೇಕು ಎಂದು ಜಿಲ್ಲಾ ಅಭಿಯೋಜಕರು ಹಾಗೂ ಜಿಲ್ಲಾಮಟ್ಟದ ಆಯ್ಕೆ ಸಮಿತಿ ಸದಸ್ಯ ಕಾರ್ಯದರ್ಶಿ ಬಿ.ಗಣೇಶ ನಾಯ್ಕ ತಿಳಿಸಿದ್ದಾರೆ.

### ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ


**ಚಿತ್ರದುರ್ಗ :** ಹೆಚ್.ಎ.ಎಲ್ (ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್‌ನಲ್ಲಿ ಫಿಟ್ಟರ್, ಮೆಷಿನಿಸ್ಟ್, ಟರ್ನರ್, ಎಲೆಕ್ಟ್ರಿಷಿಯನ್, ವೆಲ್ಡರ್, ಕೋಪಾ, ಕಾರ್ಪೆಂಟರ್, ಫೌಂಡ್ರಿ ಮ್ಯಾನ್, ಶೀಟ್ ಮೆಟಲ್ ವರ್ಕರ್ ಟ್ರೇಡ್‌ಗಳಿಗೆ ಸಂಬಂಧಪಟ್ಟ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಈ ಅಪ್ರೆಂಟಿಸ್ ತರಬೇತಿಯು ಒಂದು ವರ್ಷದ ಅವಧಿಯಾಗಿರುತ್ತದೆ. ಅಭ್ಯರ್ಥಿಗಳು ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಐ.ಟಿ.ಐ ಪ್ರಮಾಣ ಪತ್ರ (ಸ್ವ ದೃಢೀಕೃತ ರಿಸಲ್ಟ್ ಶೀಟ್), ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಆರ್ಮ್ಡ್ ಪರ್ಸನಲ್ ಪ್ರಮಾಣ ಪತ್ರ, ಆಧಾರ್ ಕಾರ್ಡ್, 4 ಭಾವಚಿತ್ರ., ಎನ್‌ಸಿವಿಟಿ ನೋಂದಣಿ ಪ್ರತಿ ಅರ್ಜಿಯೊಂದಿಗೆ ಸಲ್ಲಿಸಬೇಕು.

ಅಭ್ಯರ್ಥಿಗಳು **www.apprenticeshipindia.org / candidate registration** ವೆಬ್‌ಸೈಟ್ ಮೂಲಕ ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂರವಾಣಿ ಸಂಖ್ಯೆ 08194–295108, 9945587060, 7022459064 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

### ಸಬ್‌ಇನ್ಸ್‌ಪೆಕ್ಟರ್ ಹುದ್ದೆಗಳಿಗೆ ಅರ್ಜಿ



**ಚಿತ್ರದುರ್ಗ :** ಕೇಂದ್ರ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗದ ವರು ದೆಹಲಿ ಪೊಲೀಸ್ ಮತ್ತು ಕೇಂದ್ರ ಸಶಸ್ತ್ರ ಪೊಲೀಸ್ ಪಡೆಗಳಲ್ಲಿ ಸಬ್–ಇನ್ಸ್‌ಪೆಕ್ಟರ್ ಹುದ್ದೆಗಳ ನೇಮಕಾತಿಗಾಗಿ ಮುಕ್ತ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 15 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ವಿದ್ಯಾರ್ಹತೆ: ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಪದವಿ ಅಥವಾ ತತ್ಸಮಾನ ಪಡೆದಿರಬೇಕು. ವಯೋಮಿತಿ 20 ರಿಂದ 25 ವರ್ಷದೊಳಗಿರಬೇಕು. 2023ರ ನವೆಂಬರ್ ತಿಂಗಳಿನಲ್ಲಿ ಪರೀಕ್ಷೆ ನಡೆಯಲಿದೆ.

ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗದ ವೆಬ್‌ಸೈಟ್ **www.ssckkr.kar.nic.in/https://ssc.nic.in** ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಹಾಗೂ ಸಿಬ್ಬಂದಿ ನೇಮಕಾತಿ ಆಯೋಗದ ದೂರವಾಣಿ ಸಂಖ್ಯೆ 080–25502520, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ದೂರವಾಣಿ ಸಂಖ್ಯೆ 9945587060, 7022459064 ಗೆ ಸಂಪರ್ಕಿಸಬಹುದು ಎಂದು ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ತಿಳಿಸಿದ್ದಾರೆ.

# ಗ್ರಾಮೀಣ ಜನರಿಗೆ ಸರ್ಕಾರದ ಸೌಲಭ್ಯ ತಲುಪಿಸಿ : ಟಿ.ರಘುಮೂರ್ತಿ



ಚಳ್ಳಕೆರೆ ತಾಲ್ಲೂಕಿನ ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿ ನೂತನ ಅಧ್ಯಕ್ಷ, ಉಪಾಧ್ಯಕ್ಷ ಶಾಸಕ ಟಿ.ರಘುಮೂರ್ತಿಯವರನ್ನು ಅಭಿನಂದಿಸಿದರು.

ಚಳ್ಳಕೆರೆ : ತಾಲ್ಲೂಕಿನ ವಿವಿಧೆಡೆಗಳಲ್ಲಿ ಗ್ರಾಮ ಪಂಚಾಯಿತಿಗಳ ಎರಡನೇ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆ ಪ್ರಕ್ರಿಯೆ ಗುರುವಾರ ನಡೆದಿದೆ. ಬಹುತೇಕ ಗ್ರಾಮ ಪಂಚಾಯಿತಿಗಳಲ್ಲಿ ಅವಿರೋಧವಾಗಿಯೇ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಮಾಡಿರುವುದು ಕಂಡುಬಂದಿದೆ.

ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷ ಅವಿರೋಧವಾಗಿ ಆಯ್ಕೆ ನಡೆಯಿತು ಎಂದು ಚುನಾವಣಾಧಿಕಾರಿ, ತಹಶೀಲ್ದಾರ್ ರೇಹಾನ್ ಪಾಷ ಘೋಷಿಸಿದರು. ಅಧ್ಯಕ್ಷರಾಗಿ ನಾಗವೇಣಮ್ಮಕರಿಯಣ್ಣ, ಉಪಾಧ್ಯಕ್ಷರಾಗಿ ಓಬಣ್ಣ ಆಯ್ಕೆಯಾದರು. ಸದಸ್ಯರಾದ ಕುಮಾರಸ್ವಾಮಿ, ಪಾತಲಿಂಗಪ್ಪ, ಶಿವಲಿಂಗಮ್ಮ, ಎನ್. ಮಂಜುನಾಥ, ಹಿದಾಯಿತ್‌ವುಲ್ಲಾ, ಅಂಗಡಿರಮೇಶ್, ಡಿ.ರಾಜು, ಮಂಗಳಮ್ಮ, ಗೌರಮ್ಮ, ರೇಣುಕಮ್ಮ, ಲಕ್ಷ್ಮಕ್ಕ, ಷಣ್ಮುಖಪ್ಪ, ನವೀನ್‌ಕುಮಾರ್, ಮಂಜಣ್ಣ, ಗದ್ದಿಗೆ ತಿಪ್ಪೇಸ್ವಾಮಿ, ಮಂಜುಮ್ಮ ಮುಂತಾದವರು ಹಾಜರಿದ್ದರು. ನಗರಂಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರಾಗಿ ಕಾಂಗ್ರೆಸ್ ಬೆಂಬಲಿತ ನಾಗವೇಣಮ್ಮಕರಿಯಣ್ಣ, ಓಬಣ್ಣ ಆಯ್ಕೆಯಾಗಿರುವುದು ಸಂತಸ ವಿಷಯ, ಅವರನ್ನು ಅಭಿನಂದಿಸುವುದಾಗಿ ಶಾಸಕ ಟಿ.ರಘುಮೂರ್ತಿ ಹೇಳಿದರು. ಉತ್ತಮ ಕೆಲಸ ಕಾರ್ಯಗಳನ್ನು ಮಾಡುವ ಮೂಲಕ ಮತದಾರರ ಸೇವೆಯನ್ನು ಪ್ರಾಮಾಣಿಕವಾಗಿ ಮಾಡಿ ಎಂದು ಸಲಹೆ ನೀಡಿದರು.

ಚನ್ನಮ್ಮನಾಗತಿಹಳ್ಳಿ ಗ್ರಾಮ ಪಂಚಾಯಿತಿಯಲಿ ಒಟ್ಟು 18 ಸದಸ್ಯಯಲ್ಲಿ 17 ಸದಸ್ಯರು ಹಾಜರಿದ್ದು ಎರಡನೇ ಅವಧಿಗೆ ಅಧ್ಯಕ್ಷರಾಗಿ ಡಾ.ಬಿ.ಆನಂದಕುಮಾರ್, ಉಪಾಧ್ಯಕ್ಷರಾಗಿ ಎನ್.ಆರ್.ರೂಪವಾಣಿ ಆಯ್ಕೆ ಮಾಡಿದ್ದಾರೆಂದು ಚುನಾವಣಾಧಿಕಾರಿ ಶಿವರಾಮ್ ತಿಳಿಸಿದರು. ಆಯ್ಕೆ ಪ್ರಕ್ರಿಯೆ ಮುಗಿಸಿದ ನಂತರ ಶಾಸಕ ಭವನಕ್ಕೆ ಆಗಮಿಸಿದ ನೂತನ ಅಧ್ಯಕ್ಷ, ಉಪಾಧ್ಯಕ್ಷ ಶಾಸಕರನ್ನು ಅಭಿನಂದಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಟಿ.ರಘುಮೂರ್ತಿ, ಗ್ರಾಮೀಣ ಭಾಗದ ಜನರು ನಿಮ್ಮ ಮೇಲೆ ವಿಶ್ವಾಸವಿಟ್ಟು ಮತ ನೀಡಿರುತ್ತಾರೆ. ಅದರ ಋಣ ತೀರಿಸುವಂತಹ ಸುದಿನ ನಿಮಗೆ ಬಂದಿದೆ. ಗ್ರಾಮೀಣ ಜನರಿಗೆ ಸರ್ಕಾರದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ತಲುಪಿಸುವ ಕೆಲಸ ಮಾಡಬೇಕು. ಮೊದಲನೇ ಅವಧಿಯಲ್ಲಿ ಉತ್ತಮ ಕೆಲಸಗಳಾದಂತೆ, ಎಡರನೇ ಅವಧಿಗೆ ಆಯ್ಕೆಯಾದವರು ಉತ್ತಮವಾಗಿ ಕೆಲಸ ಕಾರ್ಯಗಳನ್ನು ಮಾಡಿ ಎಂದರು.

ಈ ಸಂದರ್ಭದಲ್ಲಿ ಸದಸ್ಯರಾದ ವೀರಭದ್ರನಾಯಕ, ಎಂ.ರಾಜಣ್ಣ, ತ್ಯಾಗರಾಜು, ರಾಧಮ್ಮ, ದಳಪತಿಭೀಮಜ್ಜ, ಮತ್ಸಮುದ್ರತಿಪ್ಪೇಸ್ವಾಮಿ, ಅನಿಲಾಕ್ಷಿ, ಮುಖಂಡರಾದ ಡಿ.ಟಿ.ಭೂತಲಿಂಗಪ್ಪ, ಗುಜ್ಜಾರಪ್ಪ, ಕಿರಣ್‌ಶಂಕರ್, ಜಯಕುಮಾರ್, ಆಂಜನೇಯ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು. ರಾಮಜೋಗಿಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧವಾಗಿ ಆಯ್ಕೆ ನಡೆಯಿತು ಎಂದು ಸಿಡಿಪಿಇ ಹರಿಪ್ರಸಾದ್ ತಿಳಿಸಿದರು. ಅಧ್ಯಕ್ಷರಾಗಿ ಜಿ.ಆರ್.ರಾಧ, ಉಪಾಧ್ಯಕ್ಷ ಸುಧಮ್ಮ ಅವಿರೋಧವಾಗಿ ಆಯ್ಕೆಯಾದರು.

ತಾಲ್ಲೂಕಿನ ಗೋಪನಹಳ್ಳಿ ಗ್ರಾಮದ ಅಧ್ಯಕ್ಷ, ಉಪಾಧ್ಯಕ್ಷ ಆಯ್ಕೆಯೂ ಅವಿರೋಧವಾಗಿ ನಡೆದಿದ್ದು, 17 ಸದಸ್ಯರಲ್ಲಿ 13 ಸದಸ್ಯರ ಬೆಂಬಲದೊಂದಿಗೆ ರಾಧಮ್ಮ ಅಧ್ಯಕ್ಷರಾಗಿ ಆಯ್ಕೆಯಾದರು. ಉಪಾಧ್ಯಕ್ಷ ಕೋಡಿಹಳ್ಳಮ್ಮ ಅವಿರೋಧವಾಗಿ ಆಯ್ಕೆಯಾದರು. ಈ ಗ್ರಾಮ ಪಂಚಾಯಿತಿಯ ಸದಸ್ಯೆ ಲೀಲಾವತಿ ಎರಡನೇ ಅವಧಿಗೆ ನಡೆದ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆಯನ್ನು ರದ್ದುಪಡಿಸುವಂತೆ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

## ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು



**ಚಳ್ಳಕೆರೆ :** ವಿದ್ಯಾರ್ಥಿಗಳ ಕಲಿಕೆಯ ಬಗ್ಗೆ ಶಿಕ್ಷಕರಿಗೆ ಇರುವಷ್ಟು ಜವಾಬ್ದಾರಿ ಪೋಷಕರಲ್ಲೂ ಬರಬೇಕಿದೆ. ಶಾಲೆಯ ನಂತರ ಮನೆಗಳಲ್ಲಿ ವಿದ್ಯಾರ್ಥಿಗಳಿಗೆ ಕಲಿಕೆಗೆ ಪೂರಕವಾದ ವಾತಾವರಣ ಪೋಷಕರು ನಿರ್ಮಿಸಬೇಕು ಎಂದು ಶಿಕ್ಷಣ ಸಂಪನ್ಮೂಲ ವ್ಯಕ್ತಿ ತಿಪ್ಪೇಸ್ವಾಮಿ ತಿಳಿಸಿದರು.

ನಗರದ ಕಸ್ತೂರಿ ಬಾ ಗಾಂಧಿ ಬಾಲಕಿಯರ ವಸತಿ ವಿದ್ಯಾಲಯದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಪೋಷಕರ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು ಎಂಬಂತೆ ಮಕ್ಕಳಿಗೆ ಚಿಕ್ಕ ವಯಸ್ಸಿನಲ್ಲೇ ಉತ್ತಮ ಸಂಸ್ಕಾರ ಕಲಿಸುವುದು ಮನೆಯಾಗಿದೆ. ಮಕ್ಕಳ ಮನಸ್ಸು ನಾವು ಏನು ಕಲಿಸುತ್ತೇವೆಂಯೋ ಅದನ್ನು ಮಕ್ಕಳು ಕಲಿಯುತ್ತಾರೆ. ಶಾಲೆಯಷ್ಟೇ ಎಚ್ಚರಿಕೆಯಿಂದ ಪೋಷಕರು ಮನೆಗಳಲ್ಲಿ ಮಕ್ಕಳಿಗೆ ಉತ್ತಮ ನಡೆಯನ್ನು ಕಲಿಸಬೇಕು. ಮಕ್ಕಳ ಜ್ಞಾನ ವೃದ್ದಿಗೆ ಮನೆಗಳಲ್ಲಿ ರಾಷ್ಟ್ರೀಯ ನಾಯಕರ, ಸಾಧಕರ, ಸಾಹಿತಿಗಳ, ಕವಿಗಳ, ಕವನ, ನುಡಿಮುತ್ತು ಹೀಗೆ ಹಲವಾರು ಜ್ಞಾನ ವೃದ್ದಿಸುವ ಫಲಕಗಳನ್ನು ಹಾಕಿ ಪ್ರತಿನಿತ್ಯವೂ ಮಕ್ಕಳಿಗೆ ತೋರಿಸುವ ಮೂಲಕ ಕಲಿಕೆಗೆ ಮುನ್ನಡಿಬರೆಯಬೇಕು ಎಂದರು.

ಮುಖ್ಯ ಶಿಕ್ಷಕಿ ಎಂ.ಎನ್.ಶಿವಲೀಲಾ ಮಾತನಾಡಿ, ಪೋಷಕರು ವಾರಕ್ಕೆ ಒಂದು ದಿನ ಶಾಲೆಗಳಿಗೆ ಭೇಟಿ ನೀಡಿ ಮಕ್ಕಳ ಕಲಿಕೆಯ ಬಗ್ಗೆ ಶಿಕ್ಷಕ–ರಿಂದ ಮಾಹಿತಿ ಪಡೆಯಬೇಕು. ಮಕ್ಕಳನ್ನು ಶಾಲೆಗೆ ಕಳುಹಿ ಜವಾಬ್ದಾರಿ ನುಣುಚಿಕೊಳ್ಳುವುದು ಸೂಕ್ತವಲ್ಲ. ಶಿಕ್ಷಕರು, ಪೋಷಕರು ಸಮಾನಚಿತ್ತದಿಂದ ಮಕ್ಕಳ ಮೇಲೆ ನಿಗಾವಹಿಸಿದಲ್ಲಿ ವಿದ್ಯಾರ್ಥಿಗಳು ಸಹ ಕಲಿಕೆಯ ಕಡೆಗೆ ಹೆಚ್ಚು ಗಮನ ನೀಡಿ ಉತ್ತಮ ಸಾಧನೆ ಮಾಡುವತ್ತ ಮುನ್ನಡೆಯುತ್ತಾರೆ. ನಮ್ಮ ಶಾಲೆಯಲ್ಲಿ ಕಳೆದ 12 ವರ್ಷಗಳಿಂದ ಮಕ್ಕಳ ಕಲಿಕೆಗೆ ಹೆಚ್ಚು ಶ್ರಮಿಸಿ ಪ್ರಸ್ತುತ ಚಿಕ್ಕ ಉಳ್ಳಾರ್ತಿ ಶಾಲೆಗೆ ವರ್ಗಾವಣೆಗೊಂಡ ವಿಜಯಲಕ್ಷ್ಮಿ ಅವರಿಗೆ ಬೀಳ್ಕೊಡಿಗೆ ನೀಡಲಾಗಿದೆ ಅವರ ಸೇವೆ ಎಲ್ಲಾರೂ ನೆನೆಯಬೇಕು ಎಂದರು.ಈ ಸಂದರ್ಭದಲ್ಲಿ ಶಿಕ್ಷಕರಾದ ಪುಟ್ಟರಂಗಮ್ಮ, ಕೋಮಲ, ಗಂಗಾಧರನಾಯ್ಕ, ಲತಾಶ್ರೀ, ವೀಣಾ, ಮಲ್ಲಮ್ಮ, ರಾಣಿ ಮುಂತಾದವರು ಉಪಸ್ಥಿತರಿದ್ದರು.

## ವಿವಿಧ ಪ್ರಕರಣದಲ್ಲಿ ರೈತರ ಸಾವು



**ಚಳ್ಳಕೆರೆ :** ತಾಲ್ಲೂಕಿನ ನನ್ನಿವಾಳ ಗ್ರಾಮದ ಗುಡ್ಡದ ಬಳಿ ಪೆತ್ತಮಾರನಹಟ್ಟಿ ಗ್ರಾಮದ ರೈತ ಅಪ್ಪಣ್ಣ (40) ಹೊಟ್ಟೆ ನೋವು ತಾಳಲಾರದೆ ಮರಕ್ಕೆ ನೇಣು ಹಾಕಿಕೊಂಡು ಮೃತಪಟ್ಟಿರುತ್ತಾನೆ. ಮೃತನ ಸಹೋದರ ಜಯಣ್ಣ ಪೊಲೀಸರಿಗೆ ದೂರಿನಲ್ಲಿ ನನ್ನ ತಮ್ಮನಿಗೆ ಹಲವಾರು ತಿಂಗಳುಗಳಿಂದ ಹೊಟ್ಟೆನೋವು ಇತ್ತು ಆಸ್ಪತ್ರೆಗಳಿಗೆ ತೋರಿಸಿದರೂ ವಾಸಿಯಾಗಿಲ್ಲ. ಇದರಿಂದ ಬೇಸತ್ತು ನೇಣು ಹಾಕಿಕೊಂಡಿದ್ದಾನೆಂದು ತಿಳಿಸಲಾಗಿದೆ.

**ಬೈಕ್ ಪಲ್ಟಿ ವ್ಯಕ್ತಿ ಸಾವು :** ಮತ್ತೊಂದು ಪ್ರಕರಣದಲ್ಲಿ ನನ್ನಿವಾಳ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರಾಮಜೋಗಿಹಳ್ಳಿ ಗ್ರಾಮದ ವಾಸುದೇವರೆಡ್ಡಿ ಎಂಬುವವರ ಜಮೀನಿನ ಬಳಿ ಬುಧವಾರ ರಾತ್ರಿ ಬೈಕ್ ಪಲ್ಟಿಯಾಗಿ ರಸ್ತೆ ಪಕ್ಕದ ಗುಂ–ಡಿಗೆ ಬಿದ್ದು ಅದೇ ಗ್ರಾಮದ ಚಂದ್ರಶೇಖರ(43) ಎಂಬ ವ್ಯಕ್ತಿ ಮೃತಪಟ್ಟಿರುತ್ತಾನೆ. ಸ್ಥಳಕ್ಕೆ ಡಿವೈಎಸ್ಪಿ ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಿಎಸ್‌ಐ ಕೆ.ಸತೀಶ್‌ನಾಯ್ಕ ಪ್ರಕರಣಗಳನ್ನು ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ.

# ಮುದ್ದು ರಾಕ್ಷಸಿ ಹಾಡು ರಿಲೀಸ್ : ಅಭಿಷೇಕ್ ಅಂಬರೀಶ್

ಸಿನಿಮಾ ಕಾರ್ನರ್



ಶೋಕ್ದಾರ್ ಖ್ಯಾತಿಯ ಧನ್ವೀರ್ ಗೌಡ ನಟನೆಯ ಬಹುನಿರೀಕ್ಷಿತ ವಾಮನ ಸಿನಿಮಾದ ಎರಡನೇ ಹಾಡು ಬಿಡುಗಡೆಯಾಗಿದೆ. ಇತ್ತೀಚೆಗೆಷ್ಟೇ ರಿಲೀಸ್ ಆಗಿದ್ದ ವಾ..ವಾ..ವಾ..ವಾಮನ ಮಾಸ್ ನಂಬರ್ ಗೆ ಭರ್ಜರಿ ರೆಸ್ಪಾನ್ಸ್ ಸಿಕ್ಕಿತ್ತು. ಈಗ ವಾಮನ ಅಂಗಳದಿಂದ ಮುದ್ದು ರಾಕ್ಷಸಿ ಎಂಬ ರೋಮ್ಯಾಂಟಿಕ್ ಹಾಡು ಬಿಡುಗಡೆ–ಯಾಗಿದೆ. ವಿ ನಾಗೇಂದ್ರ ಪ್ರಸಾದ್ ಸಾಹಿತ್ಯ ಬರೆದಿರುವ ಹಾಡಿಗೆ ಅಜನೀಶ್ ಲೋಕನಾಥ್ ಟ್ಯೂನ್ ಹಾಕಿದ್ದು, ವಿಜಯ್ ಪ್ರಕಾಶ್ ಹಾಗೂ ಹರ್ಷಿಕಾ ದೇವನಾಥ್ ಕಂಠ ಕುಣಿಸಿದ್ದಾರೆ. ಮುದ್ದು ರಾಕ್ಷಸಿ ಹಾಡಿಗೆ ಧನ್ವೀರ್ ಹಾಗೂ ರೀಷ್ಮಾ ನಾಣಯ್ಯ ಹೆಜ್ಜೆ ಹಾಕಿದ್ದಾರೆ.

ಈಕ್ವಿನಾಕ್ಸ್ ಗ್ಲೋಬಲ್ ಎಂಟರ್‌ಟೈನ್ಮೆಂಟ್ ಬ್ಯಾನರ್ ಅಡಿಯಲ್ಲಿ "ಚೇತನ್ ಗೌಡ" ಅದ್ದೂರಿಯಾಗಿ ನಿರ್ಮಿಸಿರುವ ವಾಮನ ಸಿನಿಮಾವನ್ನು ಯುವ ನಿರ್ದೇಶಕ "ಶಂಕರ್ ರಾಮನ್" ರಚಿಸಿ ನಿರ್ದೇಶಿಸಿದ್ದಾರೆ. ಬೆಂಗಳೂರಿನ ಮಂತ್ರಿ ಮಾಲ್ ನಲ್ಲಿ ಮುದ್ದು ರಾಕ್ಷಸಿ ಮೆಲೋಡಿ ಹಾಡನ್ನು ಯಂಗ್ ರೆಬಲ್ ಸ್ಟಾರ್ ಅಭಿಷೇಕ್ ಅಂಬರೀಷ್ ರಿಲೀಸ್ ಮಾಡಿ ಗೆಳೆಯನ ಚಿತ್ರಕ್ಕೆ ಸಾಥ್ ಕೊಟ್ಟರು.

ಅಭಿಷೇಕ್ ಅಂಬರೀಷ್, ನಾನು ಈಗಷ್ಟೇ ಮುದ್ದು ರಾಕ್ಷಸಿ ಹಾಡು ನೋಡಿದೆ. ಒಂದು ಸಾಂಗ್ ಹಿಟ್ ಆಗಬೇಕು ಅಂದರೆ ಅದರ ಕ್ರೆಡಿಟ್ ಹೀರೋಗೂ ಅಲ್ಲ ಹೀರೋಯಿನ್ ಗೂ ಅಲ್ಲ. ಮ್ಯೂಸಿಕ್ ಡೈರೆಕ್ಟರ್, ಲಿರಿಕ್ಸಿಸ್ಟ್ ಗೆ. ಅವರ ಎಫರ್ಟ್ ಜಾಸ್ತಿ ಇರುತ್ತದೆ. ನಮ್ಮ ಗೆಳೆಯ ಧನ್ವೀರ್ ಇಷ್ಟು ಚೆನ್ನಾಗಿ ರೋಮ್ಯಾನ್ಸ್ ಮಾಡ್ತಾನೆ ಗೊತ್ತಿರಲಿಲ್ಲ. ಬೈ ಟು ಲವ್ ಸಿನಿಮಾದಲ್ಲಿ ಸ್ವಲ್ಪ ನೋಡಿದ್ದೇವು. ಈಗ ವಾಮನ ಮುಖಾಂತರ ಕಂಪ್ಲೀಟ್ ಕಮರ್ಷಿಯಲ್ ಪ್ಯಾಕೇಜ್, ಕ್ಯೂಟ್ ಲವರ್ ಬಾಯ್ ರೀತಿ ಕಾಣಿಸುತ್ತಿದ್ದಾನೆ ಎಂದರು.

ಧ್ವನೀರ್ ಗೌಡ ಮಾತನಾಡಿ, ಒಂದೇ ಒಂದು ಫೋನ್ ಕಾಲ್ ಗೆ ಬಂದು ಮುದ್ದು ರಾಕ್ಷಸಿ ಹಾಡನ್ನು ಅಭಿಷೇಕ್ ಅಂಬರೀಶ್ ಅವರು ಲಾಂಚ್ ಮಾಡಿಕೊಟ್ಟಿದ್ದಾರೆ. ಭೂಷಣ್ ಮಾಸ್ಟರ್ ಕೊರಿಯೋಗ್ರಫಿಗೆ ಹೆಜ್ಜೆ ಹಾಕಿದ್ದೇನೆ ಎಂದರು.

ವಾಮನ ನಿರ್ಮಾಪಕ ಚೇತನ್ ಗೌಡ ಮಾತನಾಡಿ, ಎಲ್ಲರಿಗೂ ಧನ್ಯವಾದ..ಈ ಸಮಾರಂಭವನ್ನು ಇಷ್ಟು ಯಶಸ್ವಿಯಾಗಿ ನಡೆಸಿಕೊಟ್ಟಿದ್ದೀರಾ. ನಾನು ಮೊದಲ ಸಾಂಗ್ ಬಿಡುಗಡೆ ಟೈಮ್ ನಲ್ಲಿ ಸಿನಿಮಾ ಬಗ್ಗೆ ಎಲ್ಲವನ್ನೂ ಹೇಳಿದ್ದೇನೆ. ಈ ಹಾಡನ್ನು ನೋಡಿ ಸಪೋರ್ಟ್ ಮಾಡಿ. ಕನ್ನಡ ಸಿನಿಮಾಗಳನ್ನು ನೋಡಿ ಕನ್ನಡ ಚಿತ್ರರಂಗ ಬೆಳೆಸಿ ಎಂದರು.

ನಿರ್ದೇಶಕ ಶಂಕರ್ ರಾಮನ್ ಮಾತನಾಡಿ, ಮೊದಲ ಹಾಡಿಗೆ ಅದ್ಭುತ ರೆಸ್ಪಾನ್ಸ್ ಸಿಕ್ಕಿದೆ. ಈ ಸಾಂಗ್ ನಿಮಗೆ ಡೆಡಿಕೇಟ್ ಗೆ ಮಾಡುತ್ತಿದ್ದೇವೆ. ಅಜನೀಶ್ ಲೋಕನಾಥ್ ಸಂಗೀತ, ವಿ ನಾಗೇಂದ್ರ ಪ್ರಸಾದ್ ಮುದ್ದಾದ ಸಾಹಿತ್ಯ, ವಿಜಯ್ ಪ್ರಕಾಶ್ ಹಾಗೂ ಹರ್ಷಿಕಾ ದೇವನಾಥ್ ಧ್ವನಿ ಕೂಡಿಸಿದ್ದು, ಭೂಷಣ್ ಮಾಸ್ಟರ್ ಕೊರಿಯೋಗ್ರಫ್ ಮಾಡಿದ್ದಾರೆ. ಮನೆಗೆ ಹೋಗ್ತಾ ನೀವು ಮುದ್ದು ಮುದ್ದು ರಾಕ್ಷಸಿ ಹಾಡುತ್ತಾ ಹೋಗಿ ಎಂದರು.

ವಾಮನ ಸಿನಿಮಾದಲ್ಲಿ ಧನ್ವೀರ್‌ಗೆ ನಾಯಕಿಯಾಗಿ ರೀಷ್ಮಾ ನಾಣಯ್ಯ ಅಭಿನಯಿಸಿದ್ದು, ತಾರಾ, ಸಂಪತ್, ಆದಿತ್ಯ ಮೆನನ್, ಶಿವರಾಜ್ ಕೆಆರ್ ಪೇಟೆ, ಅವಿನಾಶ್, ಅಚ್ಯುತ್ ಕುಮಾರ್, ಕಾ–ಕ್ರೋಚ್ ಸುಧಿ, ಭೂಷಣ್ ಮುಂತಾದವು ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿದ್ದಾರೆ. ಮಹೇಂದ್ರ ಸಿಂಹ ಛಾಯಾಗ್ರಹಣ, ಸುರೇಶ್ ಆರ್ಮುಗಂ ಸಂಕಲನ, ಅರ್ಜುನ್ ರಾಜ್, ವಿಕ್ರಮ್ ಮೋರ್ ಮತ್ತು ಜಾಲಿ ಬಾಸ್ಟಿನ್ ಆಕ್ಷನ್, ನವೀನ್ ಕಲಾ ನಿರ್ದೇಶನ ಚಿತ್ರಕ್ಕಿದೆ.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T